

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SK NEWS ಕನ್ನಡ

SIHI KAHI

KANNADA DAILY MORNING

BAGALKOT

Volume : 06 Issue : 260 Tuesday 05-03-2024 E-mail : maruti.b.hosamani76@gmail.com Page: 4 Price : Rs. 1/-







# ಕರ್ನಾಟಕ ರಾಜ್ಯ ನಧಾಫ್/ಪಿಂಜಾರ ಸಂಘ (ರಿ) ಶಿವಮೊಗ್ಗ ನೂತನವಾಗಿ ಆಯ್ಕೆಯಾದ ವಿಜಯನಗರ ಜಿಲ್ಲಾ ಘಟಕದ ಜಿಲ್ಲಾ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಪದಗ್ರಹಣ ಹಾಗೂ ಜನ ಜಾಗೃತಿ ಸಮಾವೇಶ



**ಹೊಸಪೇಟೆ :** ಹೊಸಪೇಟೆಯ ಕಮ್ಮವಾರಿ ಭವನ ಹೊಸಪೇಟೆಯಲ್ಲಿ ನಡೆದ ಕರ್ನಾಟಕ ರಾಜ್ಯ ನದಾಫ್ /ಪಿಂಜಾರ ಸಂಘದ ವಿಜಯನಗರ ಜಿಲ್ಲಾ ಘಟಕದ ನೂತನ ಜಿಲ್ಲಾ ಘಟಕದ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಮತ್ತು ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಾಗೂ ಜನಜಾಗೃತಿ ಸಮಾವೇಶಕ್ಕೆ ನಾಡಗೀತೆ ಹಾಗೂ ರೈತಗೀತೆ ಮುಖಾಂತರ ಚಾಲನೆ ನೀಡಿ-ದರು ಮತ್ತು ಸಂಸ್ಥಾಪಕ ದಿವಂಗತ ಹಾಜಿ ಹೀರೆಹಾಳ್ ಇಬ್ರಾಹೀಂ ಸಾಹೇಬರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗುಲಾಬಿ ಸಸಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದಲ್ಲಿ ಪಿಂಜಾರ್ ಸಮಾಜವನ್ನ ಕಡೆಗಣಿಸಲಾಗುತ್ತಿದೆ, ನಿಗಮದಲ್ಲಿ ನಮ್ಮ ಸಮಾಜಕ್ಕೆ ಯಾವೊಂದು ಸೌಲಭ್ಯಗಳು ಸಿಗುತ್ತಿಲ್ಲ, ಹಾಗಾಗಿ ನಮ್ಮ ನದಾಫ್ /ಪಿಂಜಾರ್ ಸಮಾಜಕ್ಕೆ ಪ್ರತ್ಯೇಕ ನಿಗಮ ಮಂಡಳಿ ಬಯಸಿದ್ದೇವೆ. ಇಸ್ಲಾಂ ಧರ್ಮದಲ್ಲಿ ಶೇಖಡ 35 ರಷ್ಟು ಜನಸಂಖ್ಯೆ ಪಿಂಜಾರ್ ನದಾಫ್ ಸಮಾಜದ ಜನಗಳಿದ್ದಾರೆ, ಹೀಗಿದ್ದರು ಶೈಕ್ಷಣಿಕವಾಗಿ ನಮ್ಮ ಸಮಾಜ ಹಿಂದುಳಿದಿದೆ ಎಂದು ರಾಜ್ಯಧ್ಯಕ್ಷ ಹೆಚ್. ಜಲೀಲ್ ಸಾಬ್ ಕಳವಳ ವ್ಯಕ್ತಿಪಡಿಸಿದರು. ಕರ್ನಾಟಕ ರಾಜ್ಯ ನದಾಫ್ / ಪಿಂಜಾರ್ ಸಂಘದ ವಿಜಯನಗರ ಜಿಲ್ಲೆಯ ನೂತನ ಪದಾಧಿಕಾರಿಗಳ ಪದಗ್ರಹಣ ಮತ್ತು ಜನಜಾಗೃತಿ ಸಮಾವೇಶ ಹೊಸಪೇಟೆ ನಗರದ ಕಮ್ಮಾ ಭವನದಲ್ಲಿ ಇಂದು ನಡೆಯಿತು. ಸಮಾರಂಭದಲ್ಲಿ ಬೆಂಗಳೂರಿನ ಭಾವೈಕ್ಯ ಗುರು ಪೀಠದ ಪ. ಪೊ. ಶ್ರೀ ಸಂಗಂ ಪೀರ್ ಜಿಸ್ತಿ ಗುರುಗಳು ಭಾಗವಹಿಸಿ ಸಂಘದ ಸಂಸ್ಥಾಪಕ ಅಧ್ಯಕ್ಷರು ಆದ ದಿ. ಹಾಜಿ ಹೆಚ್. ಇಬ್ರಾಹಿಂ ಅವರ ಕಾಂಗ್ರೆಸ್ ಮುಖಂಡರು ಹಾಗೂ ಅಂಜುಮನ್ ಖಿದ್ಮತ್-ಎ-ಇಸ್ಲಾಂ ಸಂಘಟನೆಯ ಹೊಸಪೇಟೆ ಅಧ್ಯಕ್ಷರು ಆದ ಹೆಚ್. ಎನ್. ಎಫ್. ಇಮಾಮ್ ನಿಯಾಜಿ ಭಾಗವಹಿಸಿ ಮಾತನಾಡಿ, ಪಿಂಜಾರ್ ಸಮಾಜ ಸರ್ಕಾರದ ಸೌಲಭ ಪಡೆಯುವ ಸಂಬಂಧ ಯಾವುದೇ ಹೋರಾಟ ಹಮ್ಮಿಕೊಂಡರು ನಮ್ಮ ಅಂಜುಮನ್ ಸಂಸ್ಥೆ ಬೆಂಬಲ ಸೂಚಿಸಿ ಜೊತೆಗೆ ನಿಲ್ಲುತ್ತದೆ ಎಂದು ಬೆಂಬಲದ ಭರವಸೆ ನೀಡಿದರು.

ಇದೇ ಸಂರ್ಭದಲ್ಲಿ ವಿಜಯನಗರ ಜಿಲ್ಲೆಗೆ ನೂತನವಾಗಿ ಆಯ್ಕೆಯಾದ ನದಾಪ್ /ಪಿಂಜಾರ್ ಸಂಘದ ಪದಾಧಿಕಾರಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ನದಾಫ್/ಪಿಂಜರ್ ಸಮಾಜದ ಮುಖಂಡರು ಸದಸ್ಯರು ಸೇರಿದ್ದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್ : ಮಾಲತೇಶ್. ಶೆಟ್ಟರ್. ಹೊಸಪೇಟೆ**




# ಗ್ಯಾರಂಟಿ ಯೋಜನೆಗಳನ್ನು ಮನೆ ಮನೆಗೆ ತಲುಪಿಸಿ: ರಾಜು ಆಲಗೂರ ಕರೆ

**ವರದಿ: ಲಾಲಸಾಬ ಸವಾರಗೋಳ.**

**ವಿಜಯಪುರ :** ದೇಶದಲ್ಲಿ ಐದು ಜನಪರ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ ಏಕೈಕ ರಾಜ್ಯ ಕರ್ನಾಟಕವಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ರಾಜು ಆಲಗೂರ ಹೇಳಿದರು.

ಪಟ್ಟಣದಲ್ಲಿ ಬುಧವಾರ ಪಂಚಾಚಾರ್ಯ ಕಲ್ಯಾಣ ಮಂಟಪದಲ್ಲಿ ಜರುಗಿದ ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತಾದ ಜಾಗೃತಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ಚುನಾವಣೆ ಪೂರ್ವದಲ್ಲಿ ನುಡಿದಂತೆ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿಗೆ ತಂದು ಅನುಷ್ಠಾನಗೊಳಿಸಿದ್ದಾರೆ. ಇದನ್ನು ಲೋಕಸಭೆ ಚುನಾವಣೆಗೆ ಮುನ್ನ ಪ್ರತಿ ಮನೆಮನೆಗೆ ತಲುಪಿಸುವ ಕಾರ್ಯವಾಗಬೇಕು ಎಂದರು.

ಸಿಂದಗಿ ಕ್ಷೇತ್ರದ ಮಾಜಿ ಶಾಸಕ ಶರಣಪ್ಪ ಸುಣಗಾರ, ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಸಂಗನಗೌಡ ಹರನಾಳ, ಬ್ಲಾಕ್ ಕಾಂಗ್ರೆಸ್ಸಿನ ಮಹಿಳಾ ಘಟಕದ ಅಧ್ಯಕ್ಷೆ ಸರಿತಾ ನಾಯಿಕ್, ಮಡಿವಾಳಪ್ಪ ಬ್ಯಾಲ್ಯಾಳ, ಜಹಾಂಗೀರ ಶಿರಸಗಿ ಗ್ಯಾರಂಟಿ ಯೋಜನೆಗಳ ಕುರಿತು ಮಾತನಾಡಿದರು. ಪರಶುರಾಮ ದಿಂಡವಾರ ಪ್ರಾಸ್ತಾವಿಕವಾಗಿ ಮಾತನಾಡಿದರು.



ದೇವರಹಿಪ್ಪರಗಿ ಹಾಗೂ ಹೂವಿನಹಿಪ್ಪರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಬಶೀರ್ ಅಹ್ಮದ್ ಬೇಪಾರಿ, ಬಿ. ಎಸ್. ಪಾಟೀಲ (ಸಾತಿಹಾಳ), ಹೂವಿನಹಿಪ್ಪರಗಿ ಬ್ಲಾಕ್ ಕಾಂಗ್ರೆಸ್ ಮಹಿಳಾ ಅಧ್ಯಕ್ಷೆ ರಮೀಜಾ ನಧಾಫ್ ಹಾಗೂ ಮತಕ್ಷೇತ್ರದ ಪ್ರಮುಖ ನಾಯಕರುಗಳಾದ ಬಿ. ಎಸ್. ಪಾಟೀಲ (ಯಾಳಗಿ), ಸುಭಾಸ್ ಛಾಯಾಗೋಳ, ಪ್ರಭುಗೌಡ ಬಿ. ಎಲ್. (ಚಬನೂರ), ಗೌರಮ್ಮ ಮುತ್ತಗಿ, ಸುಜಾತಾ ಕಳ್ಳಿಮನಿ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ನಿಂಗನಗೌಡ ಪಾಟೀಲ (ಯರನಾಳ) ಸೇರಿದಂತೆ ಸ್ಥಳೀಯ ಪಟ್ಟಣ ಪಂಚಾಯಿತಿ ಚುನಾಯಿತ ಕಾಂಗ್ರೆಸ್ ಸದಸ್ಯರು ಹಾಗೂ ಮತಕ್ಷೇತ್ರದ ಪ್ರಮುಖ ನಾಯಕರ ಅನುಪಸ್ಥಿತಿ ಎದ್ದುಕಾಣುತ್ತಿತ್ತು.

ಇದು ದೇವರಹಿಪ್ಪರಗಿ ಮತಕ್ಷೇತ್ರದ ಕಾಂಗ್ರೆಸ್ನಲ್ಲಿ ಎಲ್ಲವೂ ಸರಿಯಾಗಿಲ್ಲ ಎನ್ನಲು ಮತ್ತೊಮ್ಮೆ ಸಾಕ್ಷಿಯಾಯಿತು. ಬೆಳಿಗ್ಗೆ ಹನ್ನೊಂದು ಗಂಟೆಗೆ ಆರಂಭಗೊಳ್ಳಬೇಕಾಗಿದ್ದ ಸಭೆ ಎರಡು ಗಂಟೆಗಳ ಕಾಲ ವಿಳಂಬವಾಗಿ ಮಧ್ಯಾಹ್ನ ಒಂದು ಗಂಟೆಗೆ ಆರಂಭಗೊಂಡಿತು.

ಸಭೆಯಲ್ಲಿ ರಾಜ್ಯ ಯುವ ಕಾಂಗ್ರೆಸ್ ಜಂಟಿ-ಕಾರ್ಯದರ್ಶಿ ಸಂತೋಷ ದೊಡಮನಿ, ಅಶೋಕ ಚಲವಾದಿ, ಸಿ. ಎಸ್. ನ್ಯಾಮಣ್ಣವರ (ಯಾಳವಾರ), ಮೈನೂದ್ಧಿನ ಬಾಗವಾನ (ಹುಣಶ್ಯಾಳ), ರಮೇಶ ಗುಬ್ಬೇವಾಡ, ಹುಯೋಗಿ ತಳ್ಳೋಳ್ಳಿ, ಪ್ರೊ. ಯಂಕಂಚಿ, ಲಾಳೇಮಶಾಕ್ ರೂಗಿ, ದಾವುಲಸಾಬ್ ನಾಯ್ಕೋಡಿ, ವಿಠ್ಠಲ ದೇಗಿನಾಳ, ಪ್ರಕಾಶ ಗುಡಿಮನಿ, ಪಟ್ಟಣ ಪಂಚಾಯಿತಿ ನಾಮನಿರ್ದೇಶಿತ ಸದಸ್ಯರಾದ ರಾಜು ಮೆಟಗಾರ, ಸುನೀಲ ಕನಮಡಿ, ಹುಸೇನ ಕೊಕಟನೂರ, ಸುನಂದಾ ಸೊನ್ನಳ್ಳಿ, ರಾವುತಮಾಸ್ತರ ತಳಕೇರಿ, ಬಸವರಾಜ ಇಂಗಳಗಿ ಸೇರಿದಂತೆ ವಿವಿಧ ಗ್ರಾಮಗಳ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡಿ: ಡಾ. ಪ್ರಭುಗೌಡ

**ವರದಿ: ಲಾಲಸಾಬ ಸವಾರಗೋಳ**

**ದೇವರಹಿಪ್ಪರಗಿ :** ಮಕ್ಕಳ ಸರ್ವಾಂಗೀಣ ಬೆಳವಣಿಗೆಯಲ್ಲಿ ಶಿಕ್ಷಕರ ಹಾಗೂ ಪಾಲಕರ ಪಾತ್ರ ಅತ್ಯಂತ ಮಹತ್ವಪೂರ್ಣವಾಗಿದೆ ಎಂದು ವಿಜಯಪುರದ ಅನುಗ್ರಹ ಆಸ್ಪತ್ರೆಯ ಖ್ಯಾತ ನೇತ್ರತಜ್ಞ ಪ್ರಭುಗೌಡ ಬಿ. ಎಲ್. (ಚಬನೂರ) ಹೇಳಿದರು.




ಮಂಗಳವಾರ ಇಲ್ಲಿನ ಇಂದುಮತಿ ಸಾವಳಗಿ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯೆಯೇ ನಿಜವಾದ ಸಂಪತ್ತು. ಮಕ್ಕಳಿಗಾಗಿ ನೀವು ಪಾಲಕರು ಯಾವುದೇ ಸ್ಥಿರವಾದ ಆಸ್ತಿಗಳನ್ನು ಮಾಡದೇ ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡಿ ಉತ್ತಮ ಪ್ರಜೆಗಳನ್ನಾಗಿ ಮಾಡಿದರೆ ಅದುವೇ ಮಕ್ಕಳ ಪಾಲಿನ ದೊಡ್ಡ ಆಸ್ತಿ ಎಂದರು.

ಕನ್ನೋಳ್ಳಿ ಹಿರೇಮಠದ ಶ್ರೀ ಸಿದ್ಧಲಿಂಗಶ್ರೀಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ, ಇಂದಿನ ದಿನಗಳಲ್ಲಿ ಮಕ್ಕಳ ಕಲಿಕೆಗೆ ಪಾಲಕರು ಹೆಚ್ಚಿನ ಆಸಕ್ತಿ , ಜವಾಬ್ದಾರಿ ವಹಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದು ಹೇಳುತ್ತಾ, ಮುಂದಿನ ದಿನಗಳಲ್ಲಿ ಸಂಸ್ಥೆ ಇನ್ನೂ ಉತ್ತರೋತ್ತರವಾಗಿ ಬೆಳೆಯಲಿ ಎಂದು ಹಾರೈಸಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಶಾಂತಪ್ಪ ಸಾವಳಗಿ ವಹಿಸಿಕೊಂಡು ಮಕ್ಕಳಿಗೆ ಪಾರಿತೋಷಕ ವಿತರಿಸಿದರು. ನಂತರ ಮಕ್ಕಳಿಂದ ವಿವಿಧ ಮನರಂಜನೆಯ ಕಾರ್ಯಕ್ರಮಗಳು ಜರುಗಿದವು.

ಸಂಸ್ಥೆಯ ಕಾರ್ಯದರ್ಶಿ ಸಂತೋಷ ಸಾವಳಗಿ, ಶಂಕರಗೌಡ ಪಾಟೀಲ, ಸಂಗಮೇಶ ಪಾಟೀಲ, ಪ್ರವೀಣ ಕುಲಕರ್ಣಿ, ಶಶಿಕಾಂತ, ಸಚೀನ ಸಾವಳಗಿ ಹಾಗೂ ಸಿಬ್ಬಂದಿ ಭಾಗ್ಯಶ್ರೀ ಹಂಚಾಟೆ, ಪವಿತ್ರಾ ಹಳಿಮನಿ, ಪೂಜಾ ಹಿರೇಮಠ ಸೇರಿದಂತೆ ಮಕ್ಕಳು, ಪಾಲಕರು ಉಪಸ್ಥಿತರಿದ್ದರು.

# ಶ್ರದ್ಧೆ, ಒಗ್ಗಟ್ಟಿನಿಂದ ಪ್ರತಿಯೊಂದು ಕಾರ್ಯ ಯಶಸ್ವಿ: ಪ್ರಭು ಶ್ರೀ

**ಚಿಮ್ಮಡ :** ಶ್ರದ್ಧೆ ಹಾಗೂ ಒಗ್ಗಟ್ಟು ಇದ್ದರೆ ಯಾವುದೇ ಕಾರ್ಯವನ್ನು ಯಶಸ್ವಿಯಾಗಿ ನೆರವೇರಿಸಲು ಸಾಧ್ಯವೆಂದು ವಿರಕ್ತಮಠದ ಶ್ರೀ ಪ್ರಭು ಮಹಾಸ್ವಾಮಿಗಳು ಹೇಳಿದರು.



ಗ್ರಾಮದ ಶ್ರೀ ಬನಶಂಕರಿದೇವಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದ ಪ್ರಭಾವಳಿ ಅರ್ಪಣಾ ಹಾಗೂ ಪ್ರಸಾದ ಪೂಜಾ ಕಾರ್ಯಕ್ರಮದ ನಂತರ ನಡೆದ ಸಭೆಯ ಸಾನಿಧ್ಯ ವಹಿಸಿ ಮಾತನಾಡಿದ ಅವರು ಯಾವುದೇ ಜಾತಿ, ಮತ, ಪಂಥಗಳನ್ನು ನೋಡದೆ ಪ್ರತಿಯೊಂದು ಸಮುದಾಯವನ್ನು ಒಟ್ಟಿಗೆ ಸೇರಿಸಿಕೊಂಡು ನಡೆಸುತ್ತಿರುವ ಇಂಥಹ ಜಾತ್ರೆ, ಧಾರ್ಮಿಕ ಕಾರ್ಯಕ್ರಮ ನಡೆಸುತ್ತಿರುವುದು ಶ್ಲಾಘನೀಯವಾದದ್ದು ಶ್ರದ್ಧೆ, ಭಕ್ತಿಯೊಂದಿಗೆ ಒಗ್ಗಟ್ಟು ಸೇರಿದರೆ ಯಾವುದೇ ಕಾರ್ಯ ಯಶಸ್ವಿಯಾಗುತ್ತದೆಂದರು.

ರಘುನಾಥ ಪ್ರೀಯ ಸಾಧು ಮಹಾರಾಜರ ಮಠದ ಶ್ರೀ ಜನಾರ್ಧನ ಮಹಾರಾಜರು ಮಾತನಾಡಿ ಹಬ್ಬ ಹರಿದಿನಗಳು ಭಾರತೀಯ ಸಂಸ್ಕೃತಿಯ ಪ್ರತೀಕ ಪ್ರತಿಯೊಂದು ಹಬ್ಬದ ಮೂಲ ಪ್ರಕೃತಿದತ್ತವಾಗಿ ಬಂದಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಟಗಾರ ಸಮಾಜದ ಪ್ರಮುಖರಾದ ಶ್ರೀಕಾಂತ ಜಾಡಗೌಡರ ವಹಿಸಿದ್ದರು. ಮುಖ್ಯ ಅಥಿತಿಗಳಾಗಿ, ಗ್ರಾ.ಪಂ. ಅಧ್ಯಕ್ಷೆ ಶ್ರೀಮತಿ ಮಾಲಾ ಅಶೋಕ ಮೋಟಗಿ, ರಾಮಣ್ಣ ಮುಗಳಖೋಡ, ಅಣ್ಣಪ್ಪಗೌಡ ಪಾಟೀಲ, ಬಾಳಪ್ಪಾ ಹಳಿಂಗಳಿ, ಬಿ.ಎಸ್. ಪಾಟೀಲ, ಗುರಲಿಂಗಪ್ಪಾ ಪೂಜಾರಿ, ಗುರಪ್ಪಾ ಬಳಗಾರ, ಉಮೇಶ ಪೂಜಾರಿ, ರಾಚಯ್ಯ ಮಠಪತಿ, ಈಶ್ವರ ಬಡಿಗೇರ ಇಲಾಹಿ ಜಮಖಂಡಿ ವೇದಿಕೆಯಲ್ಲಿದ್ದರು. ಬನಶಂಕರಿದೇವಿ ಸೇವಾ ಸಮೀತಿಯ ಕಾರ್ಯದರ್ಶೀ ಅಶೋಕ ಧಡೂತಿ ಪ್ರಾಸ್ತಾವಿಕವಾಗಿ ಮಾತನಾಡಿದರು, ಪ್ರೌಢಶಾಲಾ ನಿವೃತ್ತ ಮುಖ್ಯೋಪಾದ್ಯಾಯ ಕಲ್ಲಪ್ಪ ವಿಜಾಪೂರ ನಿರೂಪಿಸಿ ವಂದಿಸಿದರು.

ಇದೇ ಸಂಧರ್ಬದಲ್ಲಿ ಶ್ರೀ ಬನಶಂಕರಿ ದೇವಿಗೆ ಸುಮಾರು ಐವತ್ತು ಸಾವಿರ ವೆಚ್ಚಲ್ಲಿ ನಿರ್ಮಿಸಲಾದ ಪ್ರಭಾವಳಿ ಅರ್ಪಿಸಿದ ದೇವಪ್ಪಾ ಹಾದಿಮನಿ ಸೇರಿದಂತೆ ಹಲವು ದಾನಿಗಳನ್ನು ಸತ್ಕರಿಸಲಾಯಿತು.

## ಈಜುಗೊಳ ನಿರ್ವಹಣೆಗೆ ವ್ಯವಸ್ಥಾಪಕರ ನೇಮಕ

**ಬಾಗಲಕೋಟೆ :** ಜಿಲ್ಲಾ ಕ್ರೀಡಾಂಗಣದಲ್ಲಿರುವ ಈಜುಗೊಳದ ನಿರ್ವಹಣೆಗಾಗಿ ವ್ಯವಸ್ಥಾಪಕರು, ನಿರ್ವಾಹಕರನ್ನು ತಾತ್ಕಾಲಿಕವಾಗಿ ಗೌರವಧನ ಮೇಲೆ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ನಿಗದಿತ ಅರ್ಜಿ ನಮೂನೆಯನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬಾಗಲಕೋಟೆ ಇವರಿಂದ ಪಡೆದುಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಮಾರ್ಚ 5 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354-235896, 9739722700ಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ವಿಜ್ಞಾನ ಜೀವನದ ಅವಿಭಾಜ್ಯ ಅಂಗ: ಲಕ್ಷ್ಮೀ ಶಂಕರ ವನೇಶಿ

**ವರದಿ: ಲಾಲಸಾಬ ಸವಾರಗೋಳ.**

**ವಿಜಯಪುರ :** ವಿಜ್ಞಾನ ವಿಷಯವು ಅತ್ಯಂತ ತಾರ್ಕಿಕ ಹಾಗೂ ನಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಿದೆ ಎಂದು ವಿಜ್ಞಾನ ವಿಷಯದ ಶಿಕ್ಷಕಿ ಲಕ್ಷ್ಮೀ ಶಂಕರ ವನೇಶಿ ಹೇಳಿದರು.



ಕೊಲ್ಹಾರ ತಾಲೂಕಿನ ಕುಪಕಡ್ಡಿ ಗ್ರಾಮದ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಹಮ್ಮಿಕೊಂಡು ಮಾತನಾಡಿದ ಅವರು ಮಕ್ಕಳು ವಿಜ್ಞಾನ ವಿಷಯವನ್ನು ಆಸಕ್ತಿಯಿಂದ ಅಭ್ಯಸಿಸುವ ಮೂಲಕ ಉನ್ನತ ಮಟ್ಟದಲ್ಲಿ ಸಾಧನೆ ಮಾಡಬೇಕು. ನಮ್ಮ ದೇಶದ ವಿಜ್ಞಾನಿಗಳು ವಿಶ್ವಕ್ಕೆ ಅಪಾರ ಕೊಡುಗೆ ನೀಡುವ ಮೂಲಕ ದೇಶದ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಮಕ್ಕಳಿಗೆ ವಿಜ್ಞಾನ ವಿಷಯದಲ್ಲಿ ಬರುವ ಚಿತ್ರಗಳನ್ನು ರಂಗೋಲಿಯಲ್ಲಿ ಬಿಡಿಸುವ ಸ್ಪರ್ಧೆಯನ್ನು ಏರ್ಪಡಿಸಿ ವಿಜೇತ ಮಕ್ಕಳಿಗೆ ಪ್ರಶಸ್ತಿ ಪತ್ರ ಹಾಗೂ ಪದಕಗಳನ್ನು ನೀಡಿ ಅಭಿನಂದಿಸಲಾಯಿತು.

ಎಸ್. ಡಿ. ಎಂ. ಸಿ. ಅಧ್ಯಕ್ಷರಾದ ಮುರುಗೇಶ ಹಳ್ಳಿ, ಶಿಕ್ಷಕರಾದ ಹಣಮಂತ ಬಿರಾದಾರ, ಹೇಮಾವತಿ, ಸಿದ್ದು ಕೋಟ್ಯಾಳ, ಬಾಬು ಪವಾರ, ಕವಿತಾ ಹಿರೇಮಠ, ಶಾಂತಪ್ಪ ನಾಗರಳ್ಳಿ, ಆನಂದ ಹೊಲ್ದೂರ ಹಾಗೂ ಇತರರು ಹಾಜರಿದ್ದರು.

# ಬಸವರಾಜ ಗಡಾದ ಅವರಿಗೆ ಕವಿವಿ ಇಂದ ಪಿಎಚ್.ಡಿ ಪದವಿ

**ಕೊಪ್ಪಳ :** ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಿಂದ ಬಸವರಾಜ ಶಿವಾನಂದಪ್ಪ ಗಡಾದ ಅವರಿಗೆ ಡಾಕ್ಟರ್ ಆಫ್ ಫಿಲಾಸಫಿ ಪದವಿಯನ್ನು ಘೋಷಿಸಲಾಗಿದೆ.

ಬಸವರಾಜ ಶಿವಾನಂದಪ್ಪ ಗಡಾದ ಅವರು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸಮಾಜ ವಿಜ್ಞಾನ ನಿಖಾಯದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಷಯದಲ್ಲಿ ಸಾರ್ವಜನಿಕರಲ್ಲಿ ಕಾನೂನು ಜಾಗೃತಿ ಮೂಡಿಸುವಲ್ಲಿ ಪ್ರಜಾವಾಣಿ ದಿನಪತ್ರಿಕೆಯ ಪಾತ್ರ-ಒಂದು ಅಧ್ಯಯನ ಎಂಬ ಶೀರ್ಷಿಕೆಯಡಿ ಮಹಾಪ್ರಬಂಧವನ್ನು ಸಲ್ಲಿಸಿದ್ದರು.

ಮಹಾಪ್ರಬಂಧವನ್ನು ಪರೀಕ್ಷಕರು ಮೌಲ್ಯಮಾಪನ ಮಾಡಿ ಸಲ್ಲಿಸಿದ ವರದಿಗಳನ್ನು ಪರಿಗಣಿಸಿ ಅಭ್ಯರ್ಥಿಗೆ ಪಿಎಚ್.ಡಿ ಪದವಿಯನ್ನು ಘೋಷಿಸಿದೆ.

ಬಸವರಾಜ ಅವರು ಕವಿವಿಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಡಾ.ನಾಗರಾಜ ಆರ್. ಹಳ್ಳಿಯವರ ಅವರ ಮಾರ್ಗದರ್ಶನದಲ್ಲಿ ಪಿಎಚ್.ಡಿ ಅಧ್ಯಯನ ನಡೆಸಿದ್ದರು ಎಂದು ಕವಿವಿಯ ಪ್ರಕಟಣೆ ತಿಳಿಸಿದೆ.

# ಹಿಪ್ಪರಗಿ ಜಲಾಶಯ: 3 ಟಿಎಂಸಿ ಮಾತ್ರ ನೀರು
# ಬೇಸಿಗೆ ನೀಗಿಸುವದೇ ಒಂದು ಸವಾಲು

**-ಮಲ್ಲಿಕಾರ್ಜುನ ತುಂಗಳ**

**ರಬಕವಿ-ಬನಹಟ್ಟಿ :** ಬೆಳಗಾವಿ, ವಿಜಯಪುರ ಹಾಗು ಬಾಗಲಕೋಟೆ ಜಿಲ್ಲೆಗಳ ಬಹುತೇಕ ಗ್ರಾಮಗಳಿಗೆ ಸಂಜೀವಿನಿಯಾಗಿರುವ ತಾಲೂಕಿನ ಹಿಪ್ಪರಗಿ ಜಲಾಶಯವು ತನ್ನ ಒಡಲೊಳಗಿನ ನೀರನ್ನು ಕಡಿಮೆ ಮಾಡಿಕೊಳ್ಳುತ್ತ ಇದೀಗ ಬೇಸಿಗೆ ನಿಭಾಯಿಸುವದೇ ಸವಾಲಾಗಿ ಕಾಡುತ್ತಿದೆ.



ಗರಿಷ್ಠ 6 ಟಿಎಂಸಿಯಷ್ಟು ಸಾಮರ್ಥ್ಯ ಹೊಂದಿರುವ ಹಿಪ್ಪರಗಿ ಜಲಾಶಯದಲ್ಲಿ ಇದೀಗ ಕೇವಲ 3 ಟಿಎಂಸಿಯಷ್ಟು ಮಾತ್ರ ನೀರು ಸಂಗ್ರಹವಿದೆ. ಅಧಿಕಾರಿಗಳ ಪ್ರಕಾರ ಪ್ರತಿ ತಿಂಗಳಿಗೆ 1 ಟಿಎಂಸಿಯಷ್ಟು ನೀರು ಹಿಪ್ಪರಗಿ ಜಲಾಶಯದಿಂದ ಬಳಕೆಯಾಗುತ್ತಿದೆ. ಇದೀಗ 3 ಟಿಎಂಸಿ ಮೇ ತಿಂಗಳವರೆಗೂ ನಿರ್ವಹಣೆಯಾಗುವದೇ ಸವಾಲಿನ ಸಮಸ್ಯೆಯಾಗಿದ್ದು, ಶೀಘ್ರವೇ ಮಹಾರಾಷ್ಟ್ರದಿಂದ ಕನಿಷ್ಠ 1 ಟಿಎಂಸಿಯಷ್ಟು ನೀರನ್ನು ಬಿಡುಗಡೆಗೊಳಿಸಿದ್ದಲ್ಲಿ ಬೇಸಿಗೆ ನಿಭಾಯಿಸಲು ಸಾಧ್ಯವೆಂಬುದು ತಾಂತ್ರಿಕ ವಿಭಾಗದ ಲೆಕ್ಕಾಚಾರ.

ಬೆಳೆಗೆ ನೀರು ಬಳಕೆಗೆ ಕಡಿವಾಣ?: ಕುಡಿಯುವ ನೀರಿನ ಸಮಸ್ಯೆ ಎದುರಾಗುವ ನಿಟ್ಟಿನಲ್ಲಿ ನದಿ ತಟದಲ್ಲಿರುವ ಭೂಮಿಗಳಿಗೆ ರೈತರು ಹರಿಸುತ್ತಿರುವ ನೀರು ಪೂರೈಕೆಗೆ ಕಡಿವಾಣ ಹಾಕುವ ಲೆಕ್ಕಾಚಾರವಿದೆ. ಇದರಿಂದಾಗಿ ಕುಡಿಯುವ ನೀರಿಗೆ ಜನ-ಜಾನುವಾರುಗಳಿಗೆ ಅನುಕೂಲವಾಗುವದು ಆದರೆ ರೈತ ಬೆಳೆದ ಬೆಳೆಗಳಿಗೆ ಸಮರ್ಪಕ ನೀರು ಪೂರೈಕೆಯಾಗದಿದ್ದಲ್ಲಿ ಬೆಳೆ ನಾಶವಾಗುವ ಭೀತಿಯೂ ಇದೆ. ಇದರಿಂದ ಸರ್ಕಾರ ಯಾವ ನಿರ್ಧಾರ ಕೈಗೊಂಡು ನೀರಿನ ವ್ಯವಸ್ಥೆ ಮಾಡಲಿದೆ ಎಂಬುದೇ ಪ್ರಶ್ನೆಯಾಗಿದೆ.

# ಬಲದಂಡೆ ಕಾಲುವೆಗೆ ಆಲಮಟ್ಟಿ ನೀರು

**ಬಾಗಲಕೋಟೆ :** ಆಲಮಟ್ಟಿ ಬಲದಂಡೆ ಕಾಲುವೆಗೆ ಜನ-ಜಾನುವಾರುಗಳ ಕುಡಿಯುವ ನೀರಿಗಾಗಿ ಆಲಮಟ್ಟಿ ಡ್ಯಾಂನಿಂದ ನೀರು ಬಿಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಬಿಟಿಡಿಎ ಸಭಾಪತಿಯೂ ಆಗಿರುವ ಶಾಸಕ ಎಚ್.ವೈ. ಮೇಟಿ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಆಲಮಟ್ಟಿ ಬಲದಂಡೆ ಕಾಲುವೆಗೆ ಕಳೆದ ಹಲುವ ದಿನಗಳಿಂದ ನೀರು ಇರಲಿಲ್ಲ. ಇದರಿಂದ ಈ ಕಾಲುವೆ ವ್ಯಾಪ್ತಿಯಲ್ಲಿ ಬರುವ ಬಹುಹಳ್ಳಿ ಕುಡಿಯುವ ನೀರು ಪೂರೈಕೆ ಯೋಜನೆ, ಸಿಂಗಲ್ ವಿಲೇಜ್ ಸ್ಕೀಮ್‌ಗಳಡಿ ಬರುವ ಹಳ್ಳಿಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗಿತ್ತು. ಹೀಗಾಗಿ ಬುಧವಾರ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರನ್ನು ಭೇಟಿ ಮಾಡಿ, ಈ ಕುರಿತು ಮನವಿ ಮಾಡಲಾಗಿತ್ತು ಎಂದು ಹೇಳಿದ್ದಾರೆ.

ಆಲಮಟ್ಟಿ ಬಲದಂಡೆ ಕಾಲುವೆ ಮೂಲಕ ಸುಮಾರು 8 ದಿನಗಳ ಕಾಲ ನೀರು ಬಿಡಲು ಉಸ್ತುವಾರಿ ಸಚಿವರು, ಸಂಬಂಧಿಸಿದ ಕೆಬಿಜೆ-ಎನ್‌ಎಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ನಾಳೆಯಿಂದಲೇ ಕಾಲುವೆಗೆ ನೀರು ಬರಲಿದೆ. ರೈತರು, ಬೆಳೆಗೆ ಈ ನೀರನ್ನು ಬಳಸಿಕೊಳ್ಳದೇ ಕುಡಿಯುವ ನೀರಿಗಾಗಿ ಬಳಸಬೇಕು. ಅಲ್ಲದೇ ನೀರನ್ನು ಮಿತವಾಗಿ ಬಳಕೆ ಮಾಡಬೇಕು ಎಂದು ಶಾಸಕ ಮೇಟಿ ಮನವಿ ಮಾಡಿದ್ದಾರೆ.

ಈ ಕಾಲುವೆ ವ್ಯಾಪ್ತಿಯಲ್ಲಿ ಬರುವ ಕೆರೆಗಳಿಗೆ ನೀರು ತುಂಬಿಸಲು ಅನುಕೂಲತೆಗಳಿದ್ದರೆ, ಕೆರೆಗೂ ನೀರು ತುಂಬಿಸಬೇಕು. ಬರಲಿರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ತಲೆದೋರದಂತೆ ನಾವೆಲ್ಲ ಎಚ್ಚರಿಕೆ ವಹಿಸಬೇಕಿದೆ. ಹೀಗಾಗಿ ನೀರನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿ, ಪಂಗಡದ ಕುಂದು ಕೊರತೆ ಸಭೆ

**ಬಾಗಲಕೋಟೆ :** ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರ ನೇತೃತ್ವದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯದ ಕುಂದು ಕೊರತೆ ಸಭೆಯನ್ನು ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಬುಧವಾರ ನಡೆಸಲಾಯಿತು.

ಸಭೆಯಲ್ಲಿ ಜಿಲ್ಲೆಯ ಎಲ್ಲ ತಾಲೂಕಿನಿಂದ ಆಗಮಿಸಿದ ಪರಿಶಿಷ್ಟ ಜಾತಿ ಮತ್ತು ಪಂಗಡ ಜನಾಂಗದ ಕುಂದು ಕೊರತೆಯನ್ನು ಆಲಿಸಿದರು. ತೇರದಾಳ ಗ್ರಾಮದ ಕುಡಚಿ ರಸ್ತೆ ಅಂಬೇಡ್ಕರ ವೃತ್ತದ ಸುತ್ತಲೂ ಕೊಳಚೆ ಪ್ರದೇಶವಾಗಿದ್ದು, ಶುಚಿಗೊಳಿಸಲು ಸಭೆಯ ಗಮನಕ್ಕೆ ತಂದರು. ತೇರದಾಳ ಬೆಳೆಯುತ್ತಿರುವ ನಗರವಾಗಿದ್ದು, ಮಟಕಾ, ಸಾರಾಯಿ ಸೇರಿದಂತೆ ಇತರೆ ಅಕ್ರಮ ಚಟುವಟಿಕೆಗಳು ನಡೆಯುತ್ತಿದ್ದು, ಈ ಅಕ್ರಮ ಚಟುವಟಿಕೆ ನಡೆಸುವವರು ಪ್ರಭಾವಿಗಳಾಗಿದ್ದಾರೆ. ಸಾರ್ವಜನಿಕರ ದೂರಿನ ಮೇಲೆ ಕರ್ತವ್ಯ ತೋರಿದ ಪೊಲೀಸ್ ಪೇದೆಯನ್ನು ಆ ಸ್ಥಳದಿಂದ ವರ್ಗಾಯಿಸಿದ್ದಾರೆ. ಇದರಿಂದ ವಿದ್ಯಾರ್ಥಿಗಳು, ಮಹಿಳೆಯರು ಹಾಗೂ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದೆ. ಪಾನ್‌ಶಾಪ್, ಕಿರಾಣಿ ಅಂಗಡಿಗಳಲ್ಲಿ ಯತೆಚ್ಚವಾಗಿ ಮಾರಾಟುವಾಗುತ್ತಿದ್ದು, ಹತೋಟಿಗೆ ತರಲು ಮನವಿ ಮಾಡಿದಾಗ ಮೂರು ದಿನಗಳಲ್ಲಿ ಕ್ರಮವಹಿಸುವುದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಿಳಿಸಿದು.





ತೇರದಾಳ ಮತಕ್ಷೇತ್ರವಾಗಿದ್ದರೂ ಕೂಡಾ ಇಲ್ಲಿ ಸರಕಾರಿ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜ ಇಲ್ಲ. ಈ ಗ್ರಾಮಕ್ಕೆ ಹೊಂದಿಕೊಂಡ ಖಾಸಗಿ ಸಂಸ್ಥೆಯೊಂದು ರಿಯಾಯಿತಿ ದರದಲ್ಲಿ ಪಡೆಯುತ್ತಿತ್ತು. ಆದರೆ ಮೂಲ ನಿವಾಸಿ ಆ ಸ್ಥಳವನ್ನು ತೆರವುಗೊಳಿಸಿದ್ದರಿಂದ ಆ ಖಾಸಗಿ ಶಾಲೆಯ ಸೌಲಭ್ಯವು ಕೂಡಾ ಇಲ್ಲದಂತಾಗಿದೆ ಎಂದು ಮನವಿ ಮಾಡಿಕೊಂಡರು. ಜಖಂಡಿಯ ತಾಲೂಕಿನ ಆಲಬಾಳ ರಸ್ತೆ ಹಾಳಾಗಿದ್ದು, ಕೂಡಲೇ ದುರಸ್ಥಿತೆ ಆಗ್ರಹಿಸಿದರು.

ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪಂಡಗದ ಕಾಲೋನಿಗಳಿಗೆ ಮೂಲ ಸೌಲಭ್ಯಗಳಾದ ಕುಡಿಯುವ ನೀರು, ಸ್ಮಶಾನ, ಶೌಚಾಲಯಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಆಗ್ರಹಿಸಿದರು. ಬಾದಾಮಿಯಲ್ಲಿ ವಿದ್ಯಾರ್ಥಿ ನಿಲಯಗಳಿಗೆ ಭದ್ರತೆ ಇಲ್ಲದಂತಾಗಿದೆ. ಅಲ್ಲಿ ಒಬ್ಬನೇ ವಾರ್ಡನ್ ಇರುವದರಿಂದ ತುಂಬಾ ತೊಂದರೆಯಾಗುತ್ತಿದ್ದು, ಕೂಡಲೇ ಹೆಚ್ಚುವರಿ ಸಿಬ್ಬಂದಿ ನೇಮಿಸಿಲು ಒತ್ತಾಯಿಸಲಾಯಿತು. ಸಮಾಜ ಕಲ್ಯಾಣ ಅಧೀನದಲ್ಲಿ ಬರುವ ನಿಲಯಗಳ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಲು ಕೇಳಿದಾಗ ಇದಕ್ಕೆ ಪ್ರತಿಕ್ರಿಯಿಸಿದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಮರಟ್ಟಿ ಈಗಾಗಲೇ ಹುನಗುಂದ, ಜಮಖಂಡಿ ಹೆಚ್ಚುವರಿ ವಸತಿ ನಿಲಯ ಹಾಗೂ ಹೆಚ್ಚಿನ ಸಂಖ್ಯೆಗೆ ಬೇಡಿಕೆ ಇಡಲಾಗಿದೆ ಎಂದು ತಿಳಿಸಿದರು.

ಇಳಕಲ್ಲಿನ ತೊಂಡಿಹಾಳ ಗ್ರಾಮದಲ್ಲಿ ವಸತಿ ಶಾಲೆಗೆ ಸುತ್ತಲೂ ಕೋಳಿ ಫಾರ್ಮಗಳಿದ್ದು, ಅಲ್ಲಿರುವ ಮಕ್ಕಳಿಗೆ ದುರ್ವಾಸನೆಯಿಂದ ತುಂಬಾ ತೊಂದರೆಯಾಗುತ್ತಿದೆ. ತೇರದಾಳ, ಲೋಕಾಪೂರ, ಮುಧೋಳ, ಗುಳೇದಗುಡ್ಡ, ಹುನಗುಂದ ಹಾಗೂ ಕೆರೂರಗಳಲ್ಲಿ ಪ್ರಮುಖ ರಸ್ತೆಯಲ್ಲಿ ಅಳವಡಿಸಲಾದ ಸಿಸಿಟಿವಿಗಳು ಸ್ಥಗಿತಗೊಂಡಿದ್ದು, ಕೂಡಲೇ ದುರಸ್ತಿಗೊಳಿಸಲು ಆಗ್ರಹಿಸಿದರು. ಈ ಬಗ್ಗೆ ಕ್ರಮವಹಿಸುವುದಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಿಳಿಸಿದರು.

## ಸಂವಿಧಾನ ಜಾಥಾ ಯಶಸ್ವಿಗೆ ಅಭಿನಂಧನೆ

**ಸಂವಿಧಾನ ಜಾತಿಗೆ ಬಂದು 75ನೇ ವರ್ಷಾಚರಣೆ ಹಿನ್ನಲೆಯಲ್ಲಿ ಜಿಲ್ಲೆಯಾಧ್ಯಂತ ಹಮ್ಮಿಕೊಂಡ ಸಂವಿಧಾನ ಜಾಗೃತಿ ಜಾಥಾ ಯಶಸ್ವಿಗೆ ಬಾಗಲಕೋಟೆ ಜಿಲ್ಲೆಗೆ ಬಹುಮಾನ ದೊರೆತಿದೆ. ಸಮುದಾಯದವರು ಸಹ ಈ ಜಾಗೃತಿ ಜಾಥಾದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಯಶಸ್ವಿಗೊಳಿಸಿದ್ದಕ್ಕೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅಭಿನಂಧಿಸಿದರು.**

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಡಿವಾಯ್‌ಎಸ್‌ಪಿ ಮಹೇಶ್ವರಗೌಡ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಮರಟ್ಟಿ ಸೇರಿದಂತೆ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಎಐಸಿಸಿ ಮಾನವ ಹಕ್ಕುಗಳ ಸಮಿತಿಯ ಅಧ್ಯಕ್ಷರಾಗಿ ಇಮ್ಮಿಯಾಜ್ ಹೆಬ್ಬಾಳ ನೇಮಕ




ವರದಿ:ಲಾಲಸಾಬ ಸವಾರಗೋಳ

**ವಿಜಯಪುರ :** ನಗರದ ಸೂರಜ್ ಭವನದಲ್ಲಿ ಎಐಸಿಸಿ ಮಾನವ ಹಕ್ಕುಗಳ ಸಮಿತಿಯ ನೂತನ ಸದಸ್ಯರ ಅಭಿನಂದನಾ ಸಮಾರಂಭ ಜರುಗಿತು.

ಗೊಳಸಂಗಿ ಗ್ರಾಮದ ಯುವ ಹೋರಾಟಗಾರ, ಕನ್ನಡಪರ ಸಂಘಟನೆಗಳಲ್ಲಿ ಸಕ್ರಿಯವಾಗಿ ತೊಡಗಿಕೊಂಡಿರುವ ಇಮ್ಮಿಯಾಜ್ ( ಅಬ್ದುಲ್ ರಜಾಕ್) ಹೆಬ್ಬಾಳ ಅವರು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ಸಿನ ಮಾನವ ಹಕ್ಕುಗಳ ಸಮಿತಿಯ ಗೊಳಸಂಗಿ ಗ್ರಾಮ ಘಟಕದ ಅಧ್ಯಕ್ಷರಾಗಿ ನೇಮಕಗೊಂಡಿದ್ದಾರೆ.

ಈ ಹಿಂದೆ ಅನೇಕ ಸಂಘಟನೆಗಳಲ್ಲಿ ಸಾರ್ವಜನಿಕ ಹಿತಾಸಕ್ತಿಗಾಗಿ ಹೋರಾಟಗಳಲ್ಲಿ ಪಾಲ್ಗೊಂಡಿರುವ ಇವರನ್ನು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ಸಿನ ಅಂಗ ಸಂಸ್ಥೆಯಾದ ಮಾನವ ಹಕ್ಕುಗಳ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಿರುವುದು ಇಮ್ಮಿಯಾಜ್ ಅವರ ಒಡನಾಡಿಗಳಲ್ಲಿ ಹರ್ಷ ತಂದಿದೆ.

ಅಭಿನಂದನಾ ಸಮಾರಂಭದಲ್ಲಿ ಪದಾಧಿಕಾರಿಗಳಿಗೆ ಅದೇಶ ಪ್ರತಿ ವಿತರಿಸಲಾಯಿತು. ಇಮ್ಮಿಯಾಜ ಹೆಬ್ಬಾಳ ಅದ– ಕ್ಷರು, ಅಬ್ದುಲರಜಾಕ ಆಸಂಗಿ ಉಪಾಧ್ಯಕ್ಷರು, ಬಂದೇನವಾಜ ದಳವಾಯಿ ಪ್ರಧಾನ ಕಾರ್ಯದರ್ಶಿಗಳಾಗಿ ನೇಮಕಗೊಂಡರು, ಡೊಂಗ್ರಿಸಾಬ ಹತ್ತರಕಿಹಾಳ, ಸುರೇಶ ಸಂಗಮ, ಭಾಷಾಸಾಬ ನಾಗರಾಳ, ಮೌಲಾಲಿ ಹತ್ತರಕಿಹಾಳ, ಜಾವಿದ ಹೆಬ್ಬಾಳ, ಬಂದೇನವಾಜ ಹತ್ತರಕಿಹಾಳ ಬಸೀರ ತಾಳಿಕೋಟಿ ಮೌಲಾಲಿ. ಮ.ಹತ್ತರಕಿಹಾಳ, ಮೈಬೂಬ ಹತ್ತರಕಿಹಾಳ ಸಮಿತಿಯ ಸದಸ್ಯರಾಗಿ ನೇಮಕಗೊಂಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಶಬ್ಬಿರ ದಲಾಯತ್ ಮತ್ತು ಜಿಲ್ಲಾ ಪದಾಧಿಕಾರಿಗಳು ಹಾಜರಿದ್ದರು.

# ಸೈಕ್ಲಿಂಗ್‌ನಲ್ಲಿ ದ್ವಿತೀಯ ಸ್ಥಾನ: ಬಸವರಾಜಗೆ ಅಭಿನಂದನೆ




**ಬಾಗಲಕೋಟೆ :** ಜಿಲ್ಲೆಯ ಮುಧೋಳ ತಾಲೂಕಿನ ಹಲಕಿ ಗ್ರಾಮದ ವಿಕಲಚೇತನ ಬಸವರಾಜ ತಮ್ಮಣ್ಣಪ್ಪ ಹೊರಡ್ಡಿ ಅವರು ಏಸಿಯನ್ ಪ್ಯಾರಾ ಟ್ರ್ಯಾಕ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ ದ್ವಿತೀಯ ಸ್ಥಾನ ಪಡೆದು ದೇಶ, ರಾಜ್ಯ ಹಾಗೂ ಜಿಲ್ಲೆಯ ಕೀರ್ತಿ ತಂದಿದ್ದು, ಜಿ.ಪಂ ಉಪಾಕಾರ್ಯದರ್ಶಿ ಅಮರೇಶ ನಾಯಕ, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಅಮರೇಶ ಎಚ್, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಸೇರಿದಂತೆ ಇತರರು ಅಭಿನಂಧಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಸಮೀಕ್ಷೆ ತರಬೇತಿ ಕಾರ್ಯಕ್ರಮ




**ಮೂಡಲಗಿ :** ಶ್ರೀ ಶ್ರೀಪಾದಬೋಧ ಸ್ವಾಮೀಜಿ ಸರ್ಕಾರಿ ಪ್ರಥಮದರ್ಜೆಕಾಲೇಜಿನ ಸಮಾಜಕಾರ್ಯ ವಿಭಾಗದ "ಕಲಿಕೆಯೊಂದಿಗೆದುಡಿಮೆ" (Earn while you Learn) ಅಡಿಯಲ್ಲಿಗೋಕಾಕಿನ ಮೈರಾಡ ಸಂಸ್ಥೆಯ ಸಹಯೋಗದೊಂದಿಗೆ ಸಮಾಜಕಾರ್ಯ ವಿದ್ಯಾರ್ಥಿಗಳಿಗೆಒಂದು ದಿನದಕ್ಷಯರೋಗ ನಿರ್ಮೂಲನೆ ಮತ್ತು ನಿಯಂತ್ರಣ ಹಾಗೂ ಅಸಾಂಕ್ರಾಮಿಕ ರೋಗಗಳ ತಪಾಸಣೆ ಮತ್ತು ಜಾಗೃತಿಕಾರ್ಯಕ್ರಮದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಸಮೀಕ್ಷೆಯ ಕೌಶಲ್ಯಗಳ ಬಗ್ಗೆ ಮಾಹಿತಿಯನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿ ಹಾಗೂ ಮೈರಾಡ ಸಂಸ್ಥೆಯ ಕ್ಷೇತ್ರ ನಿರ್ವಹಣಾಧಿಕಾರಿ ಶ್ರೀಕಾಂತ ಕದಮ ಹಾಗೂ ಸಮುದಾಯ ಸಂಪನ್ಮೂಲ ವ್ಯಕ್ತಿಗಳಾದ ರೂಪ ಲೂಕ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಮೈರಾಡ ಸಂಸ್ಥೆ ಬೆಳೆದು ಬಂದ ಬಗೆ, ಅದರಕಾರ್ಯ ಚಟುವಟಿಕೆಗಳ ಕುರಿತು ಸಂಕ್ಷಿಪ್ತವಾಗಿ ತಿಳಿಸಲಾಯಿತು. ಕ್ಷಯರೋಗ ಹಾಗೂ ಇತರೆ ಅಸಾಂಕ್ರಾಮಿಕ ರೋಗಗಳು, ಅವುಗಳನ್ನು ತಡೆಗಟ್ಟುವ ವಿಧಾನಗಳ ಬಗೆಗೆ ಮಾಹಿತಿಯನ್ನು ನೀಡಲಾಯಿತು. ಮೈರಾಡ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಗೋಕಾಕ ತಾಲೂಕಿನ ಸಂಗನಕೇರಿ ಹಾಗೂ ಅರಭಾಂವಿ ಗ್ರಾಮಗಳಲ್ಲಿ ಸಮೀಕ್ಷೆಯಲ್ಲಿ ಭಾಗವಹಿಸಲು ವಿದ್ಯಾರ್ಥಿಗಳಿಗೆ ತರಬೇತಿಯನ್ನು ಸಹ ನೀಡಲಾಯಿತು. ಸಮೀಕ್ಷೆಯಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಪ್ರಾತ್ಯಕ್ಷಿತೆಯನ್ನು ನೀಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಮಹೇಶ ಕಂಬಾರ ಅವರು ವಹಿಸುತ್ತಾ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಕೊಳ್ಳುವುದು ಪ್ರತಿಯೊಬ್ಬ ಜವಾಬ್ದಾರಿಯುತ ನಾಗರೀಕರ ಕರ್ತವ್ಯ, ಅದನ್ನು ಸಮಾಜಕಾರ್ಯ ವಿಭಾಗ ಬಹಳ ಅಚ್ಚುಕಟ್ಟಾಗಿ ನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದರು. ರಾಜೇಂದ್ರಪ್ರಸಾದ ಆಸಂಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜಕಾರ್ಯ ವಿಭಾಗದ ಮುಖ್ಯಸ್ಥೆ ರಾಧಾ ಎಂ. ಎನ್ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕ ಚೇತನ್‌ರಾಜ್, ಅರುಣ ಕಡಾಡಿ, ತಿಪ್ಪಣ್ಣ ಉಪ್ಪಾರ ಮುಂತಾದವರು ಹಾಜರಿದ್ದರು.

# ಮೂಡಲಗಿಯಲ್ಲಿ ಜಿಂದಾಲ್ ವಿದ್ಯಾರ್ಥಿ ವೇತನ ವಿತರಣೆ




**ಮೂಡಲಗಿ :** ಶ್ರೀ ಶ್ರೀಪಾದಬೋಧ ಸ್ವಾಮೀಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿ ವೇತನ ವಿಭಾಗ ಹಮ್ಮಿಕೊಂಡಿದ್ದ ಜಿಂದಾಲ್ ವಿದ್ಯಾರ್ಥಿ ವೇತನಕ್ಕೆ ಆಯ್ಕೆಗೊಂಡ ವಿದ್ಯಾರ್ಥಿಗಳಿಗೆ ಸೀತಾರಾಮ ಜಿಂದಾಲ್ (ಎಸ್. ಆರ್. ಜಿಂದಾಲ್) ವಿದ್ಯಾರ್ಥಿ ವೇತನದ ಚೆಕ್ ವಿತರಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಶ್ರೀ ಮಹೇಶ ವೈ ಕಂಬಾರ ಅವರು ವಿದ್ಯಾರ್ಥಿಗಳಿಗೆ ಚೆಕ್ ವಿತರಿಸುತ್ತಾ, ನಿಮ್ಮ ಪರಿಶ್ರಮದ ಫಲವಾಗಿ ಜಿಂದಾಲ್ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾಗಿದ್ದೀರಿ, ಈ ವಿದ್ಯಾರ್ಥಿ ವೇತನದ ಹಣವನ್ನು ಪುಸ್ತಕ ತೆಗೆದುಕೊಳ್ಳಲು ಉಪಯೋಗಿಸಿಕೊಂಡು ತಮ್ಮ ಜ್ಞಾನವನ್ನು ಹೆಚ್ಚಿಸಿಕೊಂಡು ಕಾಲೇಜು ಹೆಮ್ಮೆ ಪಡುವ ವಿದ್ಯಾರ್ಥಿಗಳಾಗಿ ಹೊರಹೊಮ್ಮಿ ಎಂದು ಆಶಿಸಿದರು. ವಿದ್ಯಾರ್ಥಿಗಳ ಭವಿಷ್ಯರೂಪಿಸುವಲ್ಲಿ ವಿದ್ಯಾರ್ಥಿವೇತನದ ಪಾತ್ರ ಬಹಳ ಹಿರಿದಾಗಿದ್ದು, ಈ ಕಾರ್ಯಕ್ಕೆ ಮುಂದಾದ ಪದ್ಮಭೂಷಣ ಸೀತಾರಾಮ ಜಿಂದಾಲ್‌ಅವರ ಸಂಸ್ಥೆಗೆ ಕೃತಜ್ಞತೆಗಳನ್ನು ಸಲ್ಲಿಸಿದರು. ಸದರಿಕಾರ್ಯಕ್ರಮದಲ್ಲಿ 30 ವಿದ್ಯಾರ್ಥಿಗಳಿಗೆ ಚೆಕ್ ವಿತರಿಸಲಾಯಿತು. ಕಾರ್ಯಕ್ರಮವನ್ನು ಐ.ಕ್ಯೂ.ಎ.ಸಿ. ಸಂಯೋಜಕ ಚೇತನ್‌ರಾಜ್ ನಿರೂಪಿಸಿದರು.

# ತೋಟಗಾರಿಕೆ ತರಬೇತಿಗೆ ಅರ್ಜಿ

**ಬಾಗಲಕೋಟೆ :** ತೋಟಗಾರಿಕೆ ಇಲಾಖೆಯಿಂದ 2024–25ನೇ ಸಾಲಿಗೆ ಪುರುಷ ಹಾಗೂ ಮಹಿಳಾ ರೈತ ಅಭ್ಯರ್ಥಿಗಳಿಗೆ ಬೆಳಗಾವಿ ಜಿಲ್ಲೆಯ ಹಿಡಕಲ್ ಡ್ಯಾಂ ತರಬೇತಿ ಕೇಂದ್ರದಲ್ಲಿ ಮೇ 2 ರಿಂದ 2025 ಫೆಬ್ರವರಿ 28 ವರೆಗೆ 10 ತಿಂಗಳ ತೋಟಗಾರಿಕೆ ತರಬೇತಿ ನೀಡುವ ಸಲುವಾಗಿ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ ಪಾಸಾಗಿರುವ ರೈತ ಪುರುಷ ಹಾಗೂ ಮಹಿಳೆಯರು ತೋಟಗಾರಿಕೆ ಉಪ ನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಬಾಗಲಕೋಟೆ ಕಚೇರಿಯಲ್ಲಿ ಅಥವಾ ವೆಬ್‌ಸೈಟ್ http://www.horticulturedir.karnataka.gov.in ಮೂಲಕ ಮಾರ್ಚ 1 ರಿಂದ 30 ರೊಳಗಾಗಿ ಅರ್ಜಿ ನಮೂನೆ ಡೌನಲೋಡ್ ಮಾಡಿಕೊಳ್ಳಬಹುದಾಗಿದೆ.

15 ಗುರಿ ಇದ್ದು, ಅರ್ಜಿಯ ಜೊತೆಗೆ ಉತಾರ, ಹಿಡುವಳಿ ದೃಢೀಕರಣ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ ಹಾಗೂ ಪರಿಶಿಷ್ಟ ಜಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ ಮತ್ತು ಅರ್ಜಿ ಶುಲ್ಕ ಸಾಮಾನ್ಯ ಅಭ್ಯರ್ಥಿಗಳಿಗೆ 30 ರೂ, ಎಸ್‌ಸಿ, ಎಸ್‌ಟಿ ಅಭ್ಯರ್ಥಿಗಳಿಗೆ 15 ರೂ.ಗಳ ಡಿಡಿಯನ್ನು ತೋಟಗಾರಿ–ಕೆ ಉಪನಿರ್ದೇಶಕರು, ಬಾಗಲಕೋಟೆ ಇವರ ಹೆಸರಿನಲ್ಲಿ ಪಡೆದು ಎಪ್ರೀಲ್ 1 ರಂದು ಸಂಜೆ 5.30 ರೊಳಗಾಗಿ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಮೊನಂ.9741730399, 9901435117ಗೆ ಸಂಪರ್ಕಿಸಬಹುದಾಗಿದೆ.

# ಹುನ್ನೂರದಲ್ಲಿ ಸಂಭ್ರಮದ ಕನ್ನಡ ಜ್ಯೋತಿ ರಥಯಾತ್ರೆ



**ಜಮಖಂಡಿ :** ತಾಲೂಕಿನ ಹುನ್ನೂರ ಗ್ರಾಮದಲ್ಲಿ ಕರ್ನಾಟಕ ಸುವರ್ಣ ಸಂಭ್ರಮದ ಕನ್ನಡ ಜ್ಯೋತಿ ರಥಯಾತ್ರೆ ಮೆರವಣಿಗೆ ಸಂಭ್ರಮದಿಂದ ನಡೆಯಿತು. ಜಮಖಂಡಿಯಿಂದ ಆಗಮಿಸಿದ ರಥಯಾತ್ರೆಯನ್ನು ಗ್ರಾ.ಪಂ.ಅಧ್ಯಕ್ಷ ಅಪ್ಪಣ್ಣ ಜನವಾಡ, ಉಪಾಧ್ಯಕ್ಷೆ ಅನ್ನಪೂರ್ಣ ಯಾದವಾಡ, ಪಿಡಿಒ ಮಲ್ಲಪ್ಪ ರೂಗಿ, ಗ್ರಾಪಂ ಸದಸ್ಯರು, ಉಪ ತಹಸೀಲ್ದಾರ ಬಸವರಾಜ ಸಿಂಧೂರ, ಕಂದಾಯ ನಿರೀಕ್ಷಕ ವಿನಯ ಪಾಟೀಲ, ಹುನ್ನೂರ ಗ್ರಾಮ ಆಡಳಿತಾಧಿಕಾರಿ ಶಿವಕುಮಾರ ಶೆಬಣ್ಣವರ, ಗ್ರಾಮ ಲೆಖ್ಖಾಧಿಕಾರಿ ಶಿವಶರಣ ಮಾಲಗಾರ, ಮುದಕಪ್ಪ ವಾಲಿಕಾರ ಸ್ವಾಗತಿಸಿದರು. ಮೆರವಣಿಗೆಗೆ ತಾಪಂ ಇಒ ಸಂಜೀವ ಜುನ್ನೂರ ಚಾಲನೆ ನೀಡಿದರು. ವಿವಿಧ ಕಲಾ ತಂಡಗಳು, ಗೊಂಬೆಗಳ ಕುಣಿತದೊಂದಿಗೆ ನಡೆದ ಮೆರವಣಿಗೆಯಲ್ಲಿ ಶಾಲೆಮಕ್ಕಳು ಹೆಜ್ಜೆ ಹಾಕಿ ಸಂಭ್ರಮಿಸಿದರು. ಗ್ರಾಮದ ಡಾ.ಅಂಬೇಡ್ಕರ ವೃತ್ತದಿಂದ ಆರಂಭವಾದ ಮೆರವಣಿಗೆ ಜಮಖಂಡಿಯ ನಗರದ ಕುಡಚಿ ರಸ್ತೆಯಲ್ಲಿ ಸಂಚರಿಸಿತು.ಹುನ್ನೂರ ಬಸ್ ನಿಲ್ದಾಣ ಬಳಿಯಿರುವ ಬಸವೇಶ್ವರ ವೃತ್ತದಲ್ಲಿ ಕರ್ನಾಟಕ ಜ್ಯೋತಿ ರಥದಲ್ಲಿಯ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ನೆರವೇರಿಸಲಾಯಿತು. ಕನಕದಾಸ ವೃತ್ತದಲ್ಲಿ ರಥಯಾತ್ರೆಗೆ ಅದ್ದೂರಿಯಿಂದ ಬೀಳ್ಕೊಡಲಾಯಿತು. ಮೆರವಣಿಗೆಯಲ್ಲಿ ತಾಪಂ ಮಾಜಿ ಸದಸ್ಯ ದೀಪಕ ಮಹಾಂತನ್ನವರ, ಗ್ರಾಪಂ ಸದಸ್ಯರಾದ ಕಾಡಪ್ಪ ಮರೆಗುದ್ದಿ, ಶೇಖರ ಭಜಂತ್ರಿ, ದಯಾನಂದ ದೇಸಾಯಿ, ಗಿರಮಲ್ಲ ಮೈಗೂರ, ಚಂದು ಕಲಬುರಗಿ, ಶಾಂತವ್ವ ಜಕ್ಕನ್ನವರ, ಕಾಶೀಬಾಯಿ ಅವಟಗೇರ, ಶಾಂತವ್ವ ಹುಲ್ಯಾಳ, ಮುಖಂಡ ಬಸು ಪಾಟೀಲ, ರಮೇಶ ಕಡ್ಲಿ, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಶಾಲೆ ಶಿಕ್ಷಕರು, ಸ್ತ್ರೀ–ಶಕ್ತಿ ಸಂಘಗಳ ಸದಸ್ಯರು, ಗ್ರಾಪಂ ಸಿಬ್ಬಂದಿ ಸಹಿತ ಹಲವರು ಭಾಗ ವಹಿಸಿದ್ದರು.

# ಸರಕಾರಿ ಸೌಲಭ್ಯ ಪಡೆದು ಉನ್ನತ ಹುದ್ದೆ ಪಡೆದುಕೊಳ್ಳಿ



**ಜಮಖಂಡಿ:** ವಿದ್ಯಾರ್ಥಿಗಳು ನಿರಂತರ ಅಧ್ಯಯನದಲ್ಲಿ ತೊಡಗಿ ಸರ್ಕಾರದ ಸೌಲಭ್ಯಗಳನ್ನು ಪಡೆದು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತಮ ಅಂಕ ಪಡೆದು ವಿವಿಧ ಉನ್ನತ ಹುದ್ದೆಗಳನ್ನು ಪಡೆದುಕೊಳ್ಳಬೇಕು ಎಂದು ತಹಶೀಲ್ದಾರ ಸದಾಶಿವ ಮಕ್ಕೋಜಿ ಹೇಳಿದರು.

ನಗರದ ನಂದಿಕೇಶ್ವರ ಮಂಗಲ ಕಾರ್ಯಾಲಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಸತಿ ನಿಲಯದ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಸರ್ಕಾರ ಹಿಂದುಳಿದ ವರ್ಗಗಳ ಮಕ್ಕಳಿಗೆ ಉನ್ನತ ಶಿಕ್ಷಣಕ್ಕಾಗಿ ಶೈಕ್ಷಣಿಕ ಸಾಲ ಪ್ರೋತ್ಸಾಹಧನ ಪ್ರತಿಭಾ ಪುರಸ್ಕಾರ ವಿದೇಶಿ ವ್ಯಾಸಂಗಕ್ಕಾಗಿ ಸಹಾಯದನ ಸಹಿತ ವಿಶೇಷ ಸೌಲಭ್ಯಗಳನ್ನು ನೀಡುತ್ತಿದೆ. ಸರಿಯಾಗಿ ಸದ್ಬಳಕೆ ಮಾಡಿ ಕೊಂಡು ತಮ್ಮ ಬದುಕನ್ನು ಉತ್ತಮ ರೂಪಿಸಿಕೊಳ್ಳಬೇಕೆಂದರು.

ವಿಶೇಷ ಉಪನ್ಯಾಸಕರಾದ ಎಸ್.ಎಂ.ಕುಂಬಾರ, ರಮೇಶ ಅಮಾತಿ, ಹನುಮಂತ ಮಣೂರ ಮಾತನಾಡಿದರು. ವೇದಿಕೆಯಲ್ಲಿ ನಿಲಯ ಪಾಲಕರಾದ ಎ.ಎಸ್.ಮರನೂರ, ಮಹಾಬಲ ಜುಂಜರವಾಡ, ಶೀತಲ ಯಲಗುದ್ರಿ, ಶ್ರೀಶೈಲ ಮೋದಿ, ಅಶ್ವಿನಿ ರಬಕವಿ, ಅನಿತಾ ಶಿರಗೊಂಡ, ಶಿವಲೀಲಾ ಸಾಬೋಜಿ, ಭಾಗ್ಯಶ್ರೀ ಕದಂ ಸಹಿತ ಹಲವರು ಇದ್ದರು. ಸವಿತಾ ಚಿಗರಿ ಪ್ರಾರ್ಥಿಸಿದರು. ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿ ರಾಮಲಿಂಗ ಭೈರವಾಡಗಿ ಸ್ವಾಗತಿಸಿದರು. ನಿಲಯ ಪಾಲಕ ಮಾರುತಿ ದೊಡಮನಿ ನಿರೂಪಿಸಿದರು. ನಿಲಯ ಪಾಲಕ ಬಸವರಾಜ ಆಲಗೂರ ವಂದಿಸಿದರು.

# ಮಕ್ಕಳು ಉನ್ನತ ಶಿಕ್ಷಣ ಪಡೆದು ಆದರ್ಶ ವ್ಯಕ್ತಿಗಳಾಗಿ ಬದುಕಬೇಕು: ಬಸವರಾಜ ಸಾವಕಾರ



**ಬೀಳಗಿ :** ಸಮಾಜದ ಪ್ರತಿಯೊಬ್ಬರೂ ಶಾಲೆ ಮಕ್ಕಳು ಮತ್ತು ಶಾಲೆಯ ಕುರಿತು ಕಾಳಜಿ ವಹಿಸಬೇಕು. ಮಕ್ಕಳು ಉನ್ನತ ಶಿಕ್ಷಣ ಪಡೆದು ಆದ–ರ್ಶ ವ್ಯಕ್ತಿಗಳಾಗಿ ಬದುಕಬೇಕು ಎಂದು ಶ್ರೀಮತಿ ಎಂ. ಎಂ. ಸಾವಕಾರ ಸರಕಾರಿ ಪ್ರೌಢ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಬಸವರಾಜ ಸಾವಕಾರ ಹೇಳಿದರು.

ತಾಲೂಕಿನ ಅರಕೇರಿ ಗ್ರಾಮದಲ್ಲಿ ಸರಕಾರಿ ಕನ್ನಡ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಯ 7ನೇ ತರಗತಿ ವಿದ್ಯಾರ್ಥಿನಿಯರ ಬೀಳ್ಕೊಡುವ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಸರಕಾರಿ ಕನ್ನಡ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಗುರು ಬಿ. ಎಸ್. ಭೂಷಣ್ಣವರ ಮಾತನಾಡಿ, ಶಿಕ್ಷಣದ ಜೊತೆಗೆ ಸಂಸ್ಕಾರ, ಸಂಸ್ಕೃತಿ ಅರಿಯಬೇಕು. ಮಹಿಳೆ ಇಂದು ಎಲ್ಲ ರಂಗದಲ್ಲಿಯೂ ಮುಂದಿದ್ದು, ಮಹಾನ್ ಸಾಧಕರನ್ನು ಆದರ್ಶ ವ್ಯಕ್ತಿಗಳನ್ನಾಗಿ ಮಾಡಿಕೊಂಡು ಸಾಧನೆ ಮಾಡಬೇಕು ಎಂದು ಹೇಳಿದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ. ಎಂ. ಸಾವಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಜೇನು ಹುಳದಂತೆ ಕೆಲಸ ಮಾಡಬೇಕು. ಮನಸ್ಸು ವಿಕಾರಗೊಳಿಸುವ ಮೋಬೈಲ್, ಧಾರಾವಾಹಿಗಳಿಂದ ದೂರ ಇರಬೇಕು ಎಂದು ಹೇಳಿದರು.

ಗ್ರಾಮ ಪಂಚಾಯತಿ ಅಧ್ಯಕ್ಷೆ ಲಲಿತಾ ಗೊಣ್ಣಾಗರ ಚಿಗುರು ಹಸ್ತಪ್ರತಿ ಬಿಡುಗಡೆ ಮಾಡಿದರು. ಅಶ್ವಿನಿ ಹಿರೇಮನಿ ಆದರ್ಶ ವಿದ್ಯಾರ್ಥಿನಿ, ಸ್ನೇಹಾ ಕುಂಬಾರ ಪ್ರತಿಭಾನ್ವಿತ ವಿದ್ಯಾರ್ಥಿನಿ ಬಹುಮಾನಕ್ಕೆ ಭಾಜನರಾದರು.

ಪ್ರಭಾರ ಮುಖ್ಯ ಶಿಕ್ಷಕ ಬಿ. ಎಂ. ಮನಗೂಳಿ, ಶಿಕ್ಷಕ ಮಂಜುನಾಥ ಗೊರವರ, ಶಿಕ್ಷಕಿ ರೇಣುಕಾ ಕಾಜೂರ ಮಾತನಾಡಿದರು.

ಎಸ್‌ಡಿಎಂಸಿ ಅಧ್ಯಕ್ಷ ಮಲ್ಲಪ್ಪ ಮು ಮಮದಾಪೂರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪಿಕೆಪಿಎಸ್ ಮಾಜಿ ಅಧ್ಯಕ್ಷ ಗೋವಿಂದಪ್ಪ ಬೆನಕಟ್ಟಿ, ಗ್ರಾಪಂ ಸದಸ್ಯ ಭರಮಪ್ಪ ಬಿಸನಾಳ, ಪರಶು ಮಲ್ಲಾರ, ಮಲ್ಲು ದುಲಾರಿ, ಮಹಾದೇವಿ ಗಾಣಗೇರ, ಯಲ್ಲಪ್ಪ ಸಿಡ್ಲನ್ನವರ, ಲಕ್ಷ್ಮಣ ಗೊಣ್ಣಾಗರ, ಶಿವಲಿಂಗಪ್ಪ ಹಿರೇಮನಿ, ಆರ್. ವೈ. ಹಣಮರ, ಲಕ್ಷ್ಮಣ ದನಾಕಾರ, ಶಿವಲಿಂಗಪ್ಪ ಸಿಡ್ಲನ್ನವರ, ಸಾವಿತ್ರಿ ಹಿರೆನ್ನವರ, ಎಚ್. ಬಿ. ನದಾಫ, ಸುಜಾತಾ ನಡಗೇರಿ, ಶಿಲ್ಪಾ ಕಂಬಿ ಮತ್ತಿತರಿದ್ದರು.

ಮುತ್ತು ಕುಂಬಾರ ನಿರೂಪಿಸಿದರು. ಸವಿತಾ ನ್ಯಾಮಗೌಡ ವಂದಿಸಿದರು.

## ಗೋಲಭಾವಿ ಬಸವೇಶ್ವರ ಶಾಲೆ ವಾರ್ಷಿಕೋತ್ಸವ | ಹಳೆ ವಿದ್ಯಾರ್ಥಿಗಳಿಂದ ಡೆಸ್ಕ್, ಕಂಪ್ಯೂಟರ ದೇಣಿಗೆ

# ಕಲಿತ ಶಾಲೆ, ಕಲಿಸಿದ ಗುರುಗಳನ್ನು ಮರೆಯದಿರಿ–ಸಿದ್ಧರಾಮ ಶಿವಯೋಗಿ



**ತೇರದಾಳ :** ಸಮಾಜದಲ್ಲಿ ನಾವು ಎಷ್ಟೇ ಎತ್ತರಕ್ಕೆ ಬೆಳೆದರು ಕಲಿತ ಶಾಲೆ ಹಾಗೂ ಕಲಿಸಿದ ಗುರುಗಳನ್ನು ಮರೆಯಬಾರದು. ಅವರ ಋಣ ತೀರಿಸುವ ದೃಢ ಸಂಕಲ್ಪ ಮಾಡಬೇಕೆಂದು ರನ್ನಬೆಳಗಲಿಯ ಸಿದ್ಧರಾಮ ಶಿವಯೋಗಿ ಹೇಳಿದರು.

ಗೋಲಭಾವಿ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ವಾರ್ಷಿಕೋತ್ಸವ ಸಮಾರಂಭ ಸಾನ್ನಿಧ್ಯವಹಿಸಿ ಮಾತನಾಡಿದರು. ಬದುಕಿನ ಉಜ್ವಲ ಭವಿಷ್ಯಕ್ಕೆ ಶಿಕ್ಷಣವೇ ಸಂಜೀವಿನಿಯಾಗಿದೆ. ಆದ್ದರಿಂದ ಪಾಲಕರು ಶಿಕ್ಷಣದ ಜತೆಗೆ ಸಂಸ್ಕಾರ ನೀಡುವ ಕೆಲಸ ಮಾಡಿ ಎಂದು ಹೇಳಿದರು.

ಅತಿಥಿಗಳಾಗಿ ಆಗಮಿಸಿದ್ದ ಬೀಳಗಿಯ ಗೌರಮ್ಮ ಕೆಂಗಲಗುತ್ತಿ, ತಂತ್ರಜ್ಞಾನ ಬೆಳೆದಂತೆ ಶಿಕ್ಷಣದ ಮೌಲ್ಯ ಹೆಚ್ಚಾಗುತ್ತಿದೆ. ಇತ್ತಿಚಿನ ದಿನಗಳಲ್ಲಿ ಗ್ರಾಮೀಣ ಪ್ರದೇಶದಲ್ಲಿನ ಮಕ್ಕಳು ಉನ್ನತ ಹುದ್ದೆಗಳನ್ನು ಅಲಕಂರಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಸ್ಥೆ ಅಧ್ಯಕ್ಷ ಡಿ.ಆರ್. ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ಇಲಾಖೆಯ ಬಿ.ಎಂ. ಹಳೆಮನಿ, ಬಿ.ಎಂ. ಯಲ್ಲಟ್ಟಿ ಮಾತನಾಡಿದರು. ಮುಖ್ಯಗುರು ಈರಣ್ಣ ಲಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಹಳೆ ವಿದ್ಯಾರ್ಥಿಗಳಿಂದ ದೇಣಿಗೆ–ಸಂಸ್ಥೆಯಲ್ಲಿ ಕಲಿತ ಹಳೆ ವಿದ್ಯಾರ್ಥಿಗಳು ಅಂ–ದಾಜು 2 ಲಕ್ಷ ಮೊತ್ತದ 60 ಡೆಸ್ಕ(ಬೆಂಚ್) ಹಾಗೂ ಆಶಾ ಅರಬಾಂವಿ ಕಂಪ್ಯೂಟರ್ ದೇಣಿಗೆ ನೀಡುವ ಮೂಲಕ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರರಾದರು. ಗ್ರಾಪಂ ಅಧ್ಯಕ್ಷೆ ಕಲಾವತಿ ಮಾಂಗ, ಸಂಸ್ಥೆ ಕಾರ್ಯದರ್ಶಿ ಸಿದ್ದನಗೌಡ ಪಾಟೀಲ, ಅಣ್ಣಪ್ಪ ಹಳಿಂಗಳಿ, ಸದಾಶಿವ ಹೆಗಾಡಿ, ಅಶೋಕ ಹುನ್ನೂರ, ಕಿರಣಗೌಡ ಪಾಟೀಲ, ಶಿವಗೊಂಡ ಸನದಿ, ಗುರಲಿಂಗ ಸಿದ್ದಾಪುರ, ಮರೇಗುದ್ದಿ, ಎಂ.ಸಿ. ಪಾಟೀಲ, ಕಟ್ಟಿಮನಿ ಇದ್ದರು.

# ಸಾರ್ವಜನಿಕರಿಗೆ ಸಮರ್ಪಕವಾಗಿ ಕುಡಿಯುವ ನೀರು ಒದಗಿಸಲು: ಸಚಿವ ಡಾ. ಎಂ.ಬಿ. ಪಾಟೀಲ ಸೂಚನೆ





**ವಿಜಯಪುರ** : ಈ ಬಾರಿ ಭೀಕರ ಬರಗಾಲವಿದೆ. ಮುಂಬರುವ ಬೇಸಿಗೆಯಲ್ಲಿ ಜನ ಜಾನುವಾರಗಳಿಗೆ ನೀರಿನ ತೊಂದರೆ ಆಗದಂತೆ ಮುಂಜಾಗ್ರತೆ ವಹಿಸಿ, ಅಧಿಕಾರಿಗಳು ಪೂರ್ವ ಯೋಜನೆಯೊದಿಗೆ ಕಾರ್ಯ ನಿರ್ವಹಿಸಿ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಸಮಪರ್ಕವಾಗಿ ಕುಡಿಯುವ ನೀರು ಒದಗಿಸುವಂತೆ ಬೃಹತ್ ಮತ್ತು ಮಧ್ಯಮ ಕೈಗಾರಿ–ಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಭೂತನಾಳ ಕೆರೆಯನ್ನು ತಿಡಗುಂದಿ ಅಕ್ವಾಡೆಕ್ಟ್ ಮೂಲಕ ನೀರು ತುಂಬಿಸುವ ಸ್ಥಳಕ್ಕೆ ಭಾನುವಾರ ಭೇಟಿ ನೀಡಿ ಪರಿಶೀಲನೆ ನಡೆಸಿ, ನೀರು ಹರಿಯುವ ಪ್ರಮಾಣ, ನೀರೆತ್ತುವ ಪಂಪ್, ವಿದ್ಯುತ್ ಪರಿಕರಗಳ ಸಾಮರ್ಥ್ಯ ಸೇರಿದಂತೆ ವಿವಿಧ ಸ್ಥಳಕ್ಕೆ ಭೇಟಿ ನೀಡಿ ಅಧಿಕಾರಿಗಳಿದ ಮಾಹಿತಿ ಪಡೆದ ಸಚಿವರು, ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ಪ್ರಥಮಾದ್ಯತೆಯ ಮೇಲೆ ನೀಗಿಸಬೇಕು. ಮಳೆಯ ಅಭಾವದಿಂದ ಭೂತನಾಳ ಕೆರೆಯಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದ್ದು, ವಿಜಯಪುರ ನಗರದ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಪರ್ಯಾಯ ಮಾರ್ಗದಿಂದ ತಿಡಗುಂದಿ ಅಕ್ವಾಡೆಕ್ಟ್ ಮೂಲಕ ಭೂತನಾಳ ಕೆರೆಗೆ ನೀರು ಹರಿಸಲಾಗುತ್ತಿದೆ. ಇನ್ನು ಹೆಚ್ಚುವರಿಯಾಗಿ 8–10 ಮೋಟರ್ ಅಳವಡಿಸಿ ಕೆರೆಗೆ ನೀರು ಹರಿಸಿ ಸಂಗ್ರಹಿಸಿಟ್ಟುಕೊಳ್ಳುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ತಿಡಗುಂದಿ ಅಕ್ವಾಡೆಕ್ಟನಿಂದ ಪರ್ಯಾಯ ಮಾರ್ಗದ ಮೂಲಕ ಭೂತನಾಳ ಕೆ–ರೆಗೆ ನೀರು ಹರಿಸಿ, ನಗರದ ಜನರಿಗೆ ಕುಡಿಯುವ ನೀರಿನ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಂಡು, ನೀರನ್ನು ಭೂತನಾಳ ಕೆರೆಯಲ್ಲಿ ಸಂಗ್ರಹಿಸಿಟ್ಟುಕೊಳ್ಳುವಂತೆಯೂ ಅಗತ್ಯ ಬಿದ್ದರೆ ಇನ್ನು ಹೆಚ್ಚುವರಿಯಾಗಿ ಮೋಟರ್ ಅಳವಡಿಸಿ ಪೂರ್ಣ ಪ್ರಮಾಣದಲ್ಲಿ ನೀರನ್ನು ಸಂಗ್ರಹಿಸಿಟ್ಟುಕೊಳ್ಳುವಂತೆ ಸೂಚನೆ ನೀಡಿದರು.

ಭೂತನಾಳ ಕೆರೆಗೆ ನೀರು ಸಂಗ್ರಹಿಸಲು ಅರಕೇರಿ ಶಾಖಾ ಕಾಲುವೆ ಮೂಲಕ ನೀರು ಹರಿಸುವ ಪರ್ಯಾಯ ಮಾರ್ಗದ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸಿ ವರದಿ ನೀಡುವಂತೆ ಮಹಾನಗರ ಪಾಲಿಕೆ ಹಾಗೂ ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಭೂತನಾಳ ಕೆರೆಯಿಂದ ನಗರ–ಕ್ಕೆ ಕುಡಿಯುವ ನೀರು ಒದಗಿಸಲು ಪಂಪ್ ಹೌಸ್ ಆರಂಭಿಸಲಾಗಿದೆ. ಇನ್ನು ಎರಡು ದಿನಗಳಲ್ಲಿ ಮತ್ತಷ್ಟು ನೀರು ಸಂಗ್ರಹವಾಗುವುದರಿಂದ ಇನ್ನೊಂದು ಪಂಪ್ ಆರಂಭಿಸಿ ನಗರಕ್ಕೆ ಸಮರ್ಪಕವಾಗಿ ನೀರು ಸರಬರಾಜು ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಗರದಲ್ಲಿರುವ ಐತಿಹಾಸಿಕ ಬಾವಿಗಳ ಪುನಃಶ್ಚೇತನಗೊಳಿಸಿ, ಸ್ವಚ್ಛಗೊಳಿಸಿ ಭಾವಿಯ ನೀರನ್ನು ಗೃಹ ಬಳಕೆಗಾಗಿ ಉಪಯೋಗಿಸುವಂತೆ ಕ್ರಮ ವಹಿಸಲು ಈಗಾಗಲೇ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ನಗರದಲ್ಲಿರುವ ಎರಡು ಭಾವಿಗಳಿಂದ ಸ್ವಚ್ಛಗೊಳಿಸಲಾಗಿದ್ದು, ಈ ಭಾವಿಯ ನೀರನ್ನು ಗೃಹ ಬಳಕೆಗೆ ಉಪಯೋಗಿಸಲು ಕ್ರಮ ವಹಸುವಂತೆ ಅಧಿಕಾರಿಗಳಿಗೆ ಸೂಚಿಸಿದ ಅವರು, ನಗರದಲ್ಲಿನ 476 ಕೊಳವೆ ಬಾವಿಗಳಿಗೆ ಹಾಗೂ 27 ತೆರೆದ ಬಾವಿಗಳಿಗೆ ವಿದ್ಯುತ್ ಮೋಟರ್ ಅಳವಡಿಸಿದ್ದು, ಇವುಗಳಿಂದ ನಗರದ ಜನರ ದಿನಬಳಕೆಗಾಗಿ ಪ್ರತಿ ದಿನ ನೀರು ಪೂರೈಸಲು ಅಧಿಕಾರಿಗಳು ಕ್ರಮ ವಹಿಸಿದ್ದಾರೆ ಎಂದು ಹೇಳಿದರು.

ಬೇಸಿಗೆಯಲ್ಲಿ ನಗರದಾದ್ಯಂತ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ ಅವರು, ವಿಜಯಪುರ ನಗರಕ್ಕೆ ಭೂತನಾಳ ಕೆರೆಯ ನೀರು ಕುಡಿಯಲು ಬಳಸಲಾಗುತ್ತಿದೆ. ಮಳೆ ಕೊರತೆಯಿಂದ ನೀರಿನ ಪ್ರಮಾಣ ಕಡಿಮೆಯಾಗಿರುವುದರಿಂದ ತಾತ್ಕಾಲಿಕವಾಗಿ ಕುಡಿಯುವ ನೀರಿನ ಸಮಸ್ಯೆಬಾರದಂತೆ ನೋಡಿಕೊಳ್ಳಲು ಅಕ್ವಾಡೆಕ್ಟ್ ಮೂಲಕ ನೀರು ತುಂಬಿಸಿ ಕುಡಿಯುವ ನೀರು ಪೂರೈಕೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಮಹಾನಗರ ಪಾಲಿಕೆ ಆಯುಕ್ತ ಬದ್ರೂದ್ದಿನ ಸೌದಾಗರ, ಬಸವನ ಬಾಗೇವಾಡಿ ವೃತ್ತದ ಕೆಬಿಜೆಎನ್ಎಲ್ ಅಧೀಕ್ಷಕ ಅಭಿಯಂತರರಾದ ಗೋವಿಂದ ರಾಠೋಡ, ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯ ಅಧಿಕಾರಿಗಳು ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿವಿಧ ರೇಲ್ವೆ ನಿಲ್ದಾಣಗಳ ಪುನರಾಭಿವೃದ್ಧಿಗೆ ಪ್ರಧಾನ ಮಂತ್ರಿಗಳಿಂದ ಚಾಲನೆ: ಸಂಸದ ರಮೇಶ ಜಿಗಜಿಣಗಿ

**ವಿಜಯಪುರ :** ದೇಶದ ಪ್ರಧಾನಮಂತ್ರಿಗಳು ಸಾಮಾಜಿಕ ಜಾಲತಾಣ ಮೂಲಕ ಅಮೃತ ಭಾರತ ಯೋಜನೆ ಮೂಲಕ ದೇಶದ ವಿವಿಧ ನಿಲ್ದಾಣಗಳ ಪುನರಾಭಿವೃದ್ಧಿ, ರಸ್ತೆ ಮೇಲ್ಸೇತುವೆ ಹಾಗೂ ಕೆಳಸೇತುವೆಗಳ ಸಮರ್ಪಣೆ, ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದ್ದು, ದೇಶದ ರೈಲು ನಿಲ್ದಾಣಗಳು ಅತ್ಯಾಧುನಿಕ ತಂತ್ರಜ್ಞಾನದಿಂದ ಸುಂದರ, ಸ್ವಚ್ಛ ಅಂತರಾಷ್ಟ್ರೀಯ ಗುಣಮಟ್ಟದ ಸಾರ್ವಜನಿಕರಿಗೆ ಉತ್ತಮ ಮೂಲಭೂತ ಸೌಕರ್ಯಗಳಿಂದ ಕೂಡಿದ ರೈಲು ನಿಲ್ದಾಣವಾಗಿ ರೂಪಗೊಳ್ಳಲಿದೆ ಎಂದು ಸಂಸದ ರಮೇಶ ಜಿಗಜಿಣಗಿ ಅವರು ಹೇಳಿದರು. ಇಂದು ನಗರದ ರೈಲ್ವೇ ನಿಲ್ದಾಣದಲ್ಲಿ ಏರ್ಪಡಿಸಿದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹುಬ್ಬಳ್ಳಿ ವಿಭಾಗದ ನವೀಕರಣಗೊಂಡಿರುವ 7 ನಿಲ್ದಾಣಗಳು ಮತ್ತು ಮೇಲ್ಸೇತುವೆ ಹಾಗೂ ಕೆಳಸೇತುವೆಗಳ ಶಂಕುಸ್ಥಾಪಣೆ ಹಾಗೂ ಉದ್ಘಾಟನೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಮಂತ್ರಿಗಳು ಲೋಕಾರ್ಪಣೆಗೊಳಿಸಿದ್ದಾರೆ. ಜಿಲ್ಲೆಯ ವಿಜಯಪುರ ಮತ್ತು ಆಲಮಟ್ಟಿ ರೇಲ್ವೆ ನಿಲ್ದಾಣಗಳ ಪುನರ್‌ಅಭಿವೃದ್ದಿಗೆ ಶಂಕು ಸ್ಥಾಪನೆ ಹಾಗೂ ಮಿಂಚನಾಳ, ಕ್ಯಾತನಕೇರಿ ಮತ್ತು ನಿಂಬಾಳ ರೇಲ್ವೆ ಅಂಡರ್‌ಪಾಸ್‌ಗಳನ್ನು ಇಂದು ಸಮರ್ಪಿಸಲಾಗಿದೆ ಎಂದು ಹೇಳಿದರು.

ವಿಜಯಪುರ ಜಿಲ್ಲೆಗೆ ಈಗಾಗಲೇ ಗದಗ ವರೆಗೆ ದ್ವಿಪತ ಹಳಿಗಳ ಜೋಡಣೆ ಹಾಗೂ ರೈಲ್ವೇ ವಿದ್ಯುದ್ದೀಕರಣಕ್ಕೆ ಕ್ರಮಕ್ಕೈಗೊಳ್ಳಲಾಗಿದೆ. ರೈಲುಗಳ ದಟ್ಟಣೆಯನ್ನು ಸರಳೀಕರಣಗೊಳಿಸಲು ಅಲಿಯಾಬಾದ ಹತ್ತಿರ ಗೂಡ್‌ಶೆಡ್‌ನ್ನು ನಿರ್ಮಿಸಿ ಕಾರ್ಯಾರಂಭವಾಗಿವೆ ಇನ್ನೂ ಹೆಚ್ಚು ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ರೈಲ್ವೆ ಇಲಾಖೆ ಅಧಿಕಾರಿಗಳಾದ ಸೀನಿಯರ್ ಡಿವಿಜಿನಲ್ ಪರ್ಸನಲ್ ಆಫೀಸರ್ ಆಸೀಪ್ ಹಪೀಜ್, ಅಡಿಷನಲ್ ಡಿವಿಜನ್ ರೈಲ್ವೇ ಮ್ಯಾನೇಜರ್ ಸಂಜಯ ಕುಮಾರ ಸಿಂಗ್, ಸ್ಟೇಷನ್ ಮಾಸ್ಟರ್ ಪಿ.ಟಿ ನಾಯಕ, ಮುಖ್ಯ, ವಿ.ಬಿ ಗ್ರಾಮಪುರೋಹಿತ ರೈಲ್ವೇ ಸಿಬ್ಬಂದಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳಿಂದ ಶ್ರೀ ಗಜಾನನ ದೇವಸ್ಥಾನ ಉದ್ಘಾಟನೆ



**ವಿಜಯಪುರ** : ನಗರದ ಸ್ಟೇಶನ್ ರಸ್ತೆಯ ಭೋವಿ (ವಡ್ಡರ) ಸಮಾಜದವರಿಂದ ನಿರ್ಮಿಸಿದ ನೂತನ ಶ್ರೀ ಗಜಾನನ ದೇವಸ್ಥಾನ ಉದ್ಘಾಟನೆಯನ್ನು ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಮಹಾಸ್ವಾಮಿಗಳು ಭೋವಿ ಗುರುಪೀಠ ಬಾಗಲಕೋಟ, ಚಿತ್ರದುರ್ಗ ರವರು ನೆರವೇರಿಸಿದರು. ಕಳಸಾರೋಹಣವನ್ನು ಪೂಜ್ಯ ಶ್ರೀ ಮಹಾಸ್ವಾಮಿಗಳು ದೇವಸ್ಥಾನದ ಬಸವಲಿಂಗ ಗುರುಗಳು ಜ್ಞಾನಯೋಗಾಶ್ರಮ ವಿಜಯಪುರ ರವರು ನೆರವೇರಿಸಿದರು. ದೇವಸ್ಥಾನದ ಉದ್ಘಾಟನಾ ಸಮಾರಂಭದ ಸಾನಿಧ್ಯವನ್ನು ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಮಹಾಸ್ವಾಮಿಗಳು ವಹಿಸಿ ಜ್ಯೋತಿ ಬೆಳಗಿಸುವದರ ಮೂಲಕ ಸಮಾರಂಭಕ್ಕೆ ಚಾಲನೆ ನೀಡಲಾಯಿತು. ಸಮಾರಂಭದ ಅತಿಥಿಗಳನ್ನು ಹಾಗೂ ಇನ್ನಿತರ ಮಹಾನೀಯರನ್ನು ಸಮಾಜದ ಅಧ್ಯಕ್ಷರಾದ ಶ್ರೀ ಈರಪ್ಪ ಇರಕಲ್ ರವರು ಸ್ವಾಗತಿಸಿದರು. ಶ್ರೀ ನಾಗಪ್ಪ ಗುಜ್ಜಲಕರ ರವರು ಪ್ರಾಸ್ತಾವಿಕವಾಗಿ ಮಾತನಾಡಿ ಸಮಾಜದ ಯುವಕರಿಂದ ಹಾಗೂ ಇನ್ನಿತರ ಸಮಾಜಗಳ ಸಹಕಾರದಿಂದ ದೇವಸ್ಥಾನ ನಿರ್ಮಿಸಲಾಗಿದೆ ಎಂದು ತಿಳಿಸಿದರು.

(ಯತ್ನಾಳ) ರವರ ಕಾರ್ಯಕ್ರಮದ ಅಧ್ಯಕ್ಷರಾದ ಶ್ರೀ ಬಸನಗೌಡ ರಾಮನಗೌಡ ಪಾಟೀಲ ಅನುಪಸ್ಥಿತಿಯಲ್ಲಿ ಅವರ ಸಂದೇಶವನ್ನು ಪುತ್ರರಾದ ಶ್ರೀ ರಾಮನಗೌಡ ಬಸನಗೌಡ (ಯತ್ನಾಳ) ರವರು ಪ್ರಕಟಿಸಿದರು. ಜೊತೆಗೆ ಸ್ವ–ಂತ ಮನೆ ಇಲ್ಲದ ಬಡವರು ಸರಕಾರಕ್ಕೆ ಅರ್ಜಿ ಸಲ್ಲಿಸುವದರ ಮೂಲಕ ಮನೆಗಳನ್ನು ಪಡೆಯಲು ತಿಳಿಯಪಡಿಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಶ್ರೀ ದಿನೇಶ ಹಳ್ಳಿ ಉಪಮಹಾಪೌರರು, ಮಹಾನಗರ ಪಾಲಿಕೆ ವಿಜಯಪುರ ರವರು ಗಣೇಶ ದೇವಸ್ಥಾನ ನಿರ್ಮಾಣ ಕುರಿತು ಮೆಚ್ಚುಗೆ ವ್ಯಕ್ತಪಡಿಸಿ ತಮ್ಮೆಲ್ಲರಂತೆ ನಾನು ಒಬ್ಬ ಗಣೇಶನ ಭಕ್ತನೆಂದು ಹೇಳಿದರು.

ಸಾನಿದ್ಯವಹಿಸಿದ ಜಗದ್ಗುರು ಇಮ್ಮಡಿ ಶ್ರೀ ಸಿದ್ದರಾಮೇಶ್ವರ ಮಹಾಸ್ವಾಮಿಗಳು ವಿಘ್ನಗಳ ನಿವಾರಕ ಶ್ರೀ ಗಣೇಶನ ಕುರಿತು ಆಶಿರ್ವಚನ ನೀಡಿ ಮಾತನಾಡಿದರು.

ಅತಿಥಿಗಳಾಗಿ ಆಗಮಿಸಿದ ಶ್ರೀ ಉಮೇಶ ವಂದಾಲ ಮಾಜಿ ಸದಸ್ಯರು ಮಹಾನಗರ ಪಾಲಿಕೆ ವಿಜಯಪು ರವರು ಭೋವಿ ಸಮಾಜದ ಜೊತೆಗಿನ ನಂಟಿನ ಬಗ್ಗೆ ಮಾತನಾಡುತ್ತಾ ಸಮಾಜದ ಎಲ್ಲಾ ಯುವಕರು ನನ್ನ ಮಿತ್ರರಾಗಿದ್ದಾರೆ–ಂದು ಹೇಳಿದರು. ಶ್ರೀ ಕೆ.ಎಫ್. ಅಂಕಲಗಿ ಹಿರಿಯ ನ್ಯಾಯವಾದಿಗಳು ಮಾತನಾಡಿ ವಡ್ಡರ ಸಮಾಜದವರು ಸಂಘಟಿತರಾಗಿರುವದಕ್ಕೆ ಸಂತೋಷ ವ್ಯಕ್ತಪಡಿಸಿ ಬೇರೆ ಸಮಾಜದ ಮುಖಂಡರನ್ನು ಉದ್ಘಾಟನಾ ಸಮಾರಂಭಕ್ಕೆ ಅವಾನಿಸಿದರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಇದು ಇಂದಿನ ದಿನಗಳಲ್ಲಿ ಅವಶ್ಯಕವೆಂದು ಹೇಳಿದರು. ಶ್ರೀ ಬಸವರಾಜ ಗೊಳಸಂಗಿ ಮುಖಂಡರು ಜಾಡರ ಓಣಿ, ಶ್ರೀ ಪ್ರಶಾಂತ ಲಾಳಸಂಗಿ ಮುಖಂಡರು, ಪಾಶ್ಚಾಪೂರ ಓಣಿ, ಶ್ರೀ ಪ್ರಕಾಶ ನಾಯಕೋಡಿ ಸುಭಾಸ ಕಾಲೋನಿ ಬಿಜೆಪಿ ಮುಖಂಡರು, ಶ್ರೀ ರಾಜು ಚಂದು ಕಾಳೆ ಹರಣಶಿಕಾರಿ ಸಮಾಜ ಮುಖಂಡರು, ಶ್ರೀ ದುರ್ಗಪ್ಪ ಪಡಗಾನೂರ ಅಧ್ಯಕ್ಷರು ಕುಂಚಿಕೊರವರ ಸಮಾಜ, ಶ್ರೀ ಕೈಕಾಲಸ ಕಾಂಬಳೆ ಮುಖಂಡರು ಹರಳಯ್ಯ ಸಮಾಜ ಇವರೆಲ್ಲಾ ಉಪಸ್ಥಿತರಿದ್ದರು. ಶ್ರೀ ಯಲ್ಲಪ್ಪ ಇರಕಲ್ ರವರು ವಂದನಾರ್ಪಣೆ ಮಾಡಿದರು. ಓಣಿಯ ಹಿರಿಯರಾದ ರಾಜಾರಾಮ ಕೊಣ್ಣೂರಕರ,

ನಾಗನಾಥ ಇರಕಲ್, ಪರಶುರಾಮ ಆಲಕುಂಟೆ, ಮರಗು ಕೊಣ್ಣೂರಕರ, ಲಕ್ಷ್ಮಣ ಚಾಕ್ರಿ, ರವಿ ಆಲಕುಂಟೆ, ಸಾಬಣ್ಣ ಮುರಾಳ ನಿವೃತ್ತ ತಹಶೀಲ್ದಾರ, ರಮೇಶ ಮ್ಯಾಗೇರಿ ನಿವೃತ್ತ ಅಭಿಯಂತರರು, ಯುವಕರಾದ ಶ್ರೀ ಮಾರುತಿ ಆಲಕುಂಟೆ, ಸಾಯಿಕುಮಾರ ಕೊಣ್ಣೂರಕರ, ನಾಗರಾಜ ಬಿಸನಾಳ, ಪಕೀರಚಂದ ಇರಕಲ್, ಸಂಜಯ ಇರಕಲ್, ಅಶೋಕ ತಾರನಾಳ, ಲಕ್ಷಣ ಆಲಕುಂಟೆ, ಯುವರಾಜ ಕೊಣ್ಣೂರಕರ, ರವಿಕುಮಾರ ಬಿದರಕುಂದಿ, ವೆಂಕಟೇಶ ಪಾತ್ರೋಟ,

ಪ್ರಕಾಶ ಮ್ಯಾಗೇರಿ, ಶಶಿಕಾಂತ ಮ್ಯಾಗೇರಿ, ಹಾಗೂ ಇನ್ನಿತರ ಎಲ್ಲ ಯುವಕರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

## ಸಮ್ಮೇಳನದ ಸರ್ವಾಧ್ಯಕ್ಷರಾಗಿ ಸಹಜಾನಂದ ಶ್ರೀಗಳು ಆಯ್ಕೆ



**ಜಮಖಂಡಿ** : ಬರುವ ಮಾರ್ಚ್ 17 ರಂದು ಜರುಗಲಿರುವ ಜಮಖಂಡಿ ತಾಲ್ಲೂಕು 9ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಇಲ್ಲಿನ ರುದ್ರವಾಧೂತ ಮಠದ ವೇದಾಂತಾಚಾರ್ಯ ಸಹಜಾನಂದ ಅವಧೂತ ಶ್ರೀಗಳು ಆಯ್ಕೆಯಾಗಿದ್ದಾರೆ ಎಂದು ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ ಸಂತೋಷ ತಳಕೇರಿ ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಭಾನುವಾರ ಸಭೆ ನಡೆಸಿ ಸಮ್ಮೇಳನದ ಸರ್ವಾಧ್ಯಕ್ಷರನ್ನು ಆಯ್ಕೆ ಮಾಡಿದ ಬಳಿಕ ಪದಾಧಿಕಾರಿಗಳೊಂದಿಗೆ ಶಾಸಕ ನಾಡೋಜ ಜಗದೀಶ ಗುಡಗುಂಟಿ

ಅವರ ನಿವಾಸಕ್ಕೆ ತೆರಳಿ ಸರ್ವಾಧ್ಯಕ್ಷರ ಆಯ್ಕೆ ಕುರಿತು ಮಾಹಿತಿ ನೀಡಿದರು.

ಪದಾಧಿಕಾರಿಗಳೊಂದಿಗೆ ಶಾಸಕ ಜಗದೀಶ ಗುಡಗುಂಟಿ ಅವರು ರುದ್ರಾವಧೂತ ಮಠಕ್ಕೆ ತೆರಳಿ ಶ್ರೀಗಳಿಗೆ ಅಧಿಕೃತವಾಗಿ ಆಹ್ವಾನ ನೀಡಿ ಮಾತನಾಡಿ, ವಿದ್ವಾಂಸರಾದ ಸಹಜಾನಂದ ಶ್ರೀಗಳು ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದರು.

ಉಮೇಶ ಶಿದರಡ್ಡಿ ಅವರು ಮಾತನಾಡಿ, ಸಹಜಾನಂದ ಶ್ರೀಗಳು ಸಮಾಜಕ್ಕೆ ನೀಡಿದ ಸಾಂಸ್ಕೃತಿಕ, ಆಧ್ಯಾತ್ಮಿಕ ಹಾಗೂ ಸಾಹಿತ್ಯಿಕ ಕೊಡುಗೆ ಅಪಾರವಾಗಿದೆ ಎಂದರು. ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ ಸಂತೋಷ ತಳಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗೌರವ ಕಾರ್ಯದರ್ಶಿ ವಿನೋದ ಲೋಣಿ ಇದ್ದರು.

ಕೃಷ್ಣಾನಂದ ಅವಧೂತ ಶ್ರೀಗಳು, ನಿಕಟಪೂರ್ವ ಸರ್ವಾಧ್ಯಕ್ಷ ಪ್ರೊ.ಬಸವರಾಜ ಕಡ್ಡಿ, ನಿವೃತ್ತ ಪ್ರಾಚಾರ್ಯ ಡಾ.ಸಂಗಮೇಶ ಮಟೋಳಿ, ಡಾ.ಮೃತ್ಯುಂಜಯ ಗವಿಮಠ, ಪ್ರಾಚಾರ್ಯ ಡಾ.ಟಿ.ಪಿ. ಗಿರಡ್ಡಿ, ಪಿ.ಆರ್. ರಾಮತಾಳ, ರುದ್ರಗೌಡ ಪಾಟೀಲ, ಬಿ.ಎನ್. ಅಸ್ಕಿ, ವಕೀಲ ಎನ್.ಬಿ. ಗಸ್ತಿ, ಪ್ರಶಾಂತ ಕುಲಕರ್ಣಿ ಮತ್ತಿತರರು ಇದ್ದರು.

## ಮಾ.7 ರಿಂದ ಜಾತ್ರಾ ಮಹೋತ್ಸವ, ರಥೋತ್ಸವ



**ಜಮಖಂಡಿ** : ನಗರದ ಕುಂಚನೂರ ರಸ್ತೆಯಲ್ಲಿ ಬರತಕ್ಕ ಶ್ರೀಗುರು ಚಕ್ರವರ್ತಿ ಸದಾಶಿವ ಮುತ್ತ್ಯಾರ ಮಹಾಸಂಸ್ಥಾನ ಹೊಸ ಮಠದಲ್ಲಿ ಮಾರ್ಚ 7 ರಿಂದ 11ರ ವರೆಗೆ ಶ್ರೀ ಸದಾಶಿವ ಮುತ್ಯಾರ ಹಾಗೂ ಚಂದ್ರಮ್ಮ ತಾಯಿಯವರ ಜಾತ್ರಾ ಮಹೋತ್ಸವ ನಿಮಿತ್ತ ಧಾರ್ಮಿಕ ಮತ್ತು ಜಾನುವಾರ ಜಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಶಿವರುದ್ರಮುತ್ತ್ಯಾ ಹಿರೇಮಠ ಹೇಳಿದರು.

ನಗರದ ಶ್ರೀಗುರು ಚಕ್ರವರ್ತಿ ಸದಾಶಿವ ಮುತ್ತ್ಯಾರ ಮಹಾಸಂಸ್ಥಾನ ಹೊಸಮಠದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಪ್ರಚಾರ ಸಾಮಗ್ರಿ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಮಾರ್ಚ 7 ರಂದು ಮುಂಜಾನೆ 8 ಗಂಠೆಗೆ ಸದಾಶಿವ ಮುತ್ತ್ಯಾರ ಭಾವಚಿತ್ರಕ್ಕೆ ಪೂಜೆ ಸಲ್ಲಿಸದ ನಂತರ ಬನಶಂಕರಿ ತೋಟದ ವಿಠ್ಠಲ ಮಂದಿರದಿಂದ ಆರಂಭಗೊಳ್ಳುವ ಕುಂಭಮೇಳ ಮಂಗಲ ವಾಧ್ಯ ಮೇಳದೊಂದಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಶ್ರೀಮಠಕ್ಕೆ ತಲುಪಲಿದೆ. ಮಾರ್ಚ 8ರಂದು ಶ್ರೀಮಠದಲ್ಲಿ ವಿಶೇಷ ಮಹಾಪೂಜೆ ಮತ್ತು ಧಾರ್ಮಿಕ ಕಾರ್ಯಕ್ರಮಗಳು, ಮಾರ್ಚ 9 ರಂದು ಶ್ರೀಮಠದಲ್ಲಿ ಮಹಾಶಿವರಾತ್ರಿ ಉಪಾಸನೆ, ಶಿವಭಜನೆ, ಮಾರ್ಚ 10ರಂದು ಬೆಳಿಗ್ಗೆ 5 ಗಂಠೆಗೆ ಮಹಾರುದ್ರಾಭಿಷೇಕ ನಂತರ ಶಿವದಿಕ್ಷೆ ಮತ್ತು ಲಿಂಗದಿಕ್ಷೆ, ರಾತ್ರಿ 8 ಗಂಠೆಗೆ ರಥೋತ್ಸವ ನಡೆಯಲಿದೆ. ಭಕ್ತರಿಂದ ಮಠದ ಶ್ರೀಗಳಿಗೆ ತುಲಾಭಾರ ನಡೆಯಲಿದೆ. ಮಾರ್ಚ 13ರಂದು ಮಹಾಪ್ರಸಾದ ಪಂಥಿ ನಂತರ ತ್ರಿಕಾಲ ಜ್ಞಾನದ ನುಡಿ ಸಾರುವದು ನಡೆಯಲಿದೆ ಎಂದರು.

ಮಾರ್ಚ 7 ರಿಂದ 11ರ ವರೆಗೆ ಜಾನುವಾರು ಜಾತ್ರೆ ನಡೆಯಲಿದ್ದು, ಉತ್ತಮ ರಾಸುಗಳ ಪ್ರದರ್ಶನ ಜೊತೆಗೆ ತೆರೆಬಂಡಿ ಸ್ಪರ್ಧೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ತುಕಾರಾಮ ಮೋರೆ (9449335488, ಮಲ್ಲಪ್ಪ ಮರನೂರ (9886913417), ಶ್ರೀಶೈಲ ಮಿರ್ಜಿ (8971674249), ಶಂಕ್ರೆಪ್ಪ ನ್ಯಾಮಗೌಡ (9380429449), ಮಂಜು ಕಡಪಟ್ಟಿ (8147998665) ಸಂಚಾರಿಗಳಿಗೆ ಭಕ್ತರು ಸಂಪರ್ಕಿಸಬಹುದು ಎಂದರು. ಪತ್ರಿಕಾಗೋಷ್ಠಿಯಲ್ಲಿ ಬಸಪ್ಪ ಸವನೂರ, ಮಹಾಂತೇಶ ಗುಣದಾಳ, ತುಕಾರಾಮ ಮೋರೆ, ಶಂಕರ ನ್ಯಾಮಗೌಡ, ಹಣಮಂತ ನ್ಯಾಮಗೌಡ, ಧರೆಪ್ಪ ಉಪ್ಪಾರ, ಶಿವರುದ್ರ ಹಿರೇಮಠ, ಯಮನಪ್ಪ ಸವನೂರ ಸಹಿತ ಹಲವರು ಇದ್ದರು.

## ಉಪಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ವಿಜ್ಞಾನ ದಿನ ಆಚರಣೆ



**ಕೊಪ್ಪಳ** : ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ(ಕೆಸ್ಟೆಪ್ಸ್), ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಕೊಪ್ಪಳ ಹಾಗೂ ಉಪಪ್ರಾದೇಶಿಕ ವಿಜ್ಞಾನ ಕೇಂದ್ರ ಕೊಪ್ಪಳ ಇವರ ಸಂಯುಕ್ತ ಆಶ್ರಯದಲ್ಲಿ ಕೊಪ್ಪಳದ ಉಪಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಆಚರಿಸಲಾಯಿತು.

ನಿವೃತ್ತ ಹವಾಮಾನ ತಜ್ಞರಾದ ನಟರಾಜ್ ಸವಡಿ ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ದೈನಂದಿನ ಜೀವನದಲ್ಲಿ ವಿಜ್ಞಾನದ ಪಾತ್ರ, ಹವಾಮಾನ ಮುನ್ಸೂಚನೆ, ಮಳೆ ಸೇರಿದಂತೆ ವಿವಿಧ ವೈಜ್ಞಾನಿಕ ಮಾಹಿತಿಯ ಬಗ್ಗೆ ವಿಸ್ತಾರವಾಗಿ ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭೌತಶಾಸ್ತ್ರ ಉಪನ್ಯಾಸಕರು, ಉಪಪ್ರಾದೇಶಿಕ ವಿಜ್ಞಾನ ಕೇಂದ್ರ ಸಮಿತಿ ಸದಸ್ಯರಾದ ಸಿದ್ದಲಿಂಗೇಶ್ ಹಮ್ಮಿಗಿ ಅವರು, ಸರ್ ಸಿ.ವಿ. ರಾಮನ್ ಅವರ ಜೀವನ ಚರಿತ್ರೆ, ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಇತಿಹಾಸದ ಕುರಿತು ಮಾಹಿತಿ ನೀಡಿದರು. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭೌತಶಾಸ್ತ್ರ ಹಿರಿಯ ಉಪನ್ಯಾಸಕರಾದ ರವೀಂದ್ರ ಬಗಾಡೆ ಅವರು ಸರ್ ಸಿ.ವಿ. ರಾಮನ್ ಅವರ ಸಂಶೋಧನೆ, ರಾಮನ್ ಎಫೆಕ್ಟ್, ಬೆಳಕಿನ ಚದುರುವಿಕೆ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಶಿಕ್ಷಕರಾದ ವೀರೇಶ್ ಚೋಳಪ್ಪನವರ್ ಅವರು ಎಲ್ಲರೂ ವೈಜ್ಞಾನಿಕ ಮನೋಭಾವನೆ ಮತ್ತು ವೈಚಾರಿಕತೆಯನ್ನು ಬೆಳೆಸಿಕೊಳ್ಳಬೇಕು, ಸಂವಿಧಾನದ ಮೂಲಭೂತ ಕರ್ತವ್ಯದ ಆಶಯದಂತೆ ಮೌಢ್ಯತೆ ಮತ್ತು ಅಂಧಕಾರವನ್ನು ನಿರ್ಮೂಲನೆ ಮಾಡಿ ಜೀವ ಜಗತ್ತಿಗೆ ಪೂರಕವಾದ ಬದುಕನ್ನು ರೂಪಿಸಿಕೊಳ್ಳಲು ಕರೆ ನೀಡಿದರು.

ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಅಂಗವಾಗಿ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಉಪಪ್ರಾದೇಶಿಕ ವಿಜ್ಞಾನ ಕೇಂದ್ರದ ಶಿಕ್ಷಣ ಸಹಾಯಕ ಫಕೀರಸಾಬ್ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು. ತಾಂತ್ರಿಕ ಸಹಾಯಕ ಮಹಾಲಿಂಗಪ್ಪ ವಂದಿಸಿದರು. ಕುಮಾರಿ ಮರಿಯಮ್ಮ ಪ್ರಾರ್ಥನೆ ಗೀತೆ ಹಾಡಿದರು. ವಿಜ್ಞಾನ ಕೇಂದ್ರದ ಕ್ಯೂರೇಟರ್ ಮೈಲಾರಪ್ಪ ಅವರು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಡಿವೈಪಿಸಿ, ಎಸ್‌ಎಸ್‌ಕೆ ವಿಭಾಗದ ಖಿಲ್ಜೀಸ್ ಜಹಾನ್ ಜೆ, ಕೊಟ್ರಮ್ಮ ಕವಾಡೆ, ಉಪಪ್ರಾದೇಶಿಕ ವಿಜ್ಞಾನ ಕೇಂದ್ರದ ಸಿಬ್ಬಂದಿಗಳಾದ ಗೋಪಾಲ್ ರಾವ್, ಫಕೀರಸಾಬ್, ಮಹಾಲಿಂಗಪ್ಪ, ಶಂಕ್ರಪ್ಪ, 120 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಭರತೇಶ ವಿದ್ಯಾರ್ಥಿಗಳ ಸಾಧನೆ

**ಬೆಳಗಾವಿ** : ಇಲ್ಲಿಯ ಭರತೇಶ ಶೀಕ್ಷಣ ಸಂಸ್ಥೆಯ ಜೆಜಿಎನ್‌ಡಿ ಭರತೇಶ ವಾಣೀಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿನಿಯರು ಇತ್ತಿಚಿಗೆ ಇನ್ಸಿಟ್ಯೂಟ್ ಆಫ್ ಚಾಟರ್ಡ ಅಕೌಂಟಂಟ ಆಫ್ ಇಂಡಿಯಾ ಅವರು ಆಯೋಜಿಸಿದ ಹಾಗೂ ಚಾಟರ್ಡ ಆಕೌಂಟಂಟ ಫೌಂಡೇಶನ ವತಿಯಿಂದ ನಡೆಸಲಾಗುವ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದಿದ್ದಾರೆ. ಬಿಕಾಂ ವಿಭಾಗದಲ್ಲಿ ಅಧ್ಯಯನ ಮಾಡುತ್ತಿರುವ ಅಂಕಿತಾ ನಾನಾಮುತ್ತಿ ಮತ್ತು ರಾಧಾ ವೀರಗೌಡರ ಇವರು ಚಾಟರ್ಡ ಆಕೌಂಟಂಟ ಫೌಂಡೇಶನ ಪರೀಕ್ಷೆಯಲ್ಲಿ ಸಾಧನೆಗೈದಿದ್ದಾರೆ, ಅದರಂತೆ ಇನ್ಸಿಟ್ಯೂಟ್ ಆಫ್ ಕಂಪನಿ ಸೆಕ್ರೆಟರಿಸ ಆಪ್ ಇಂಡಿ–ಯಾ ಆಯೋಜಿಸಿದ ಹಾಗೂ ಕಂಪನಿ ಸೆಕ್ರೆಟರಿ ಫೌಂಡೇಶನ ವತಿಯಿಂದ ನಡೆಸಲಾಗುವ ಪರೀಕ್ಷೆಯಲ್ಲಿ ಸುಹಾನಿ ಪಾಟೀಲ ವಿದ್ಯಾರ್ಥಿನಿ ಅತ್ಯುತ್ತಮ ಸಾಧನೆಗೈದಿದ್ದಾರೆ. ಈ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಭರತೇಶ ಆಡಳಿತ ಮಂಡಳಿ ಹಾಗೂ ಮಹಾವಿದ್ಯಾಲಯದ ಪ್ರಾಚಾರ್ಯರು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ.

## ಎಫ್.ಎಸ್.ಎಲ್ ವರದಿಯಲ್ಲಿ ಘೋಷಣೆ ಕೂಗಿದ್ದು ಸಾಭೀತಾದರೆ, ಕೂಗಿದ್ದವರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು** : ಎಫ್.ಎಸ್. ಎಲ್ ವರದಿ ಬಂದ ನಂತರ ಘೋಷಣೆ ಕೂಗಿದ್ದು ನಿಜವೇ ಆಗಿದ್ದರೆ ಈ ಬಗ್ಗೆ ಗಂಭೀರ ಕ್ರಮ ವಹಿಸಲಾಗುವುದು. ಪಾಕಿಸ್ತಾನದ ಪರವಾಗಿ ಘೋಷಣೆ ನಿಜವೇ ಆಗಿದ್ದರೆ ಅಂಥವರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ. ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ವಿಧಾನಸೌಧದಲ್ಲಿ ಇಂದು ಮಾಧ್ಯಮದರೊಂದಿಗೆ ಮಾತನಾಡಿದರು.

ರಾಷ್ಟ್ರದ ವಿರುದ್ಧ ಘೋಷಣೆ ಕೂಗಿರುವುದು ಸಾಭೀತಾದರೆ ಯಾರೇ ಆಗಲಿ ಕಠಿಣ ಕ್ರಮ ವಹಿಸಲಾಗುವುದು ಎಂದರು.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State